ಸಂಪುಟ : 10 ಸಂಚಿಕೆ: 272 ಪುಟ : 4+2 ಬೆಲೆ: 3.00 ಶುಕ್ರವಾರ ಡಿಸೆಂಬರ್ 12 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 272 Pages : 4+2 Price : 3.00 Friday December 12 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ಸಿಎಂ ಸಿದ್ದರಾಮಯ್ಯ ಗದಗ ಜಿಲ್ಲಾ ಪ್ರವಾಸ



■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಡಿಸೆಂಬರ್ 13ರಂದು ಗದಗ ಜಿಲ್ಲಾ ಪ್ರವಾಸ ಕೈಗೊಳ್ಳುತ್ತಿದ್ದು, ಅಂದು ಬೆಳಿಗ್ಗೆ 10.20 ಗಂಟೆಗೆ ಬೆಳಗಾವಿಯ ಸುವರ್ಣ ವಿಧಾನಸೌಧದ ಹೆಲಿಪ್ಯಾಡ್‌ನಿಂದ ಹೆಲಿಕಾಪ್ಟರ್ ಮೂಲಕ ಹೊರಟು ಬೆಳಿಗ್ಗೆ 11.15 ಗಂಟೆಗೆ ಜಿಲ್ಲೆಯ ಲಕ್ಷ್ಮೇಶ್ವರದ ಶ್ರೀ ಉಮಾ ಪಿ.ಯು ಕಾಲೇಜು ಮೈದಾನದ ಹೆಲಿಪ್ಯಾಡ್‌ಗೆ ಆಗಮಿಸುವರು.

ಲಕ್ಷ್ಮೇಶ್ವರದ ಚಂದನ ಎಜ್ಯುಕೇಶನ್ ಸೊಸೈಟಿ ವತಿಯಿಂದ ಆಯೋಜಿಸಿರುವ ಭಾರತರತ್ನ ಪ್ರೊ. ಸಿ.ಎನ್.ಆರ್.ರಾವ್ 10ನೇ ವರ್ಷದ ವಿಜ್ಞಾನ ವಿಸ್ತ್ರತ ಕಾರ್ಯಕ್ರಮ–2025 ಹಾಗೂ ಬಿ.ಎಸ್. ಪಾಟೀಲ, ಭಾ.ಆ.ಸೇ (ನಿ) ಇವರಿಗೆ 2025ನೇ ಸಾಲಿನ ಪ್ರತಿಷ್ಠಿತ 'ಚಂದನ ಶ್ರೀ' ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಳ್ಳುವರು. ನಂತರ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ಜರುಗಿಸುವರು. ಮಧ್ಯಾಹ್ನ 3 ಗಂಟೆಗೆ ಲಕ್ಷ್ಮೇಶ್ವರದ ಶ್ರೀ ಉಮಾ ಪಿ.ಯು ಕಾಲೇಜು ಮೈದಾನ ಹೆಲಿಪ್ಯಾಡ್‌ನಿಂದ ಹೆಲಿಕಾಪ್ಟರ್ ಮೂಲಕ ಹುಬ್ಬಳ್ಳಿ ವಿಮಾನ ನಿಲ್ದಾಣಕ್ಕೆ ತೆರಳುವರು ಎಂದು ಪ್ರಕಟಣೆ ತಿಳಿಸಿದೆ.

### ಮುಖ್ಯಮಂತ್ರಿಗಳ ಜಿಲ್ಲಾ ಪ್ರವಾಸ ಕಾರ್ಯಕ್ರಮದ ಪೂರ್ವಸಿದ್ಧತಾ ಸಭೆಯಲ್ಲಿ ಡಿಸಿ ಸೂಚನೆ

# ಕಾರ್ಯಕ್ರಮದ ಸುವ್ಯವಸ್ಥೆಗೆ ಕ್ರಮ ವಹಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಡಿಸೆಂಬರ್ 13ರಂದು ಗದಗ ಜಿಲ್ಲೆಯ ಲಕ್ಷ್ಮೇಶ್ವರ ಪಟ್ಟಣಕ್ಕೆ ಆಗಮಿಸುತ್ತಿದ್ದು, ಸೂಕ್ತ ರೀತಿಯ ಶಿಷ್ಟಾಚಾರ ಪಾಲನೆಯಾಗುವಂತೆ ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಈ ಕುರಿತು ನಡೆದ ಪೂರ್ವಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಡಿಸೆಂಬರ್ 13ರಂದು ಬೆಳಿಗ್ಗೆ 10.20 ಗಂಟೆಗೆ ಬೆಳಗಾವಿಯ ಸುವರ್ಣ ವಿಧಾನಸೌಧದ ಹೆಲಿಪ್ಯಾಡ್‌ನಿಂದ ಹೆಲಿಕಾಪ್ಟರ್ ಮೂಲಕ ಹೊರಟು ಬೆಳಿಗ್ಗೆ 11.15 ಗಂಟೆಗೆ ಲಕ್ಷ್ಮೇಶ್ವರದ ಶ್ರೀ ಉಮಾ ಪಿ.ಯು ಕಾಲೇಜು ಮೈದಾನದ ಹೆಲಿಪ್ಯಾಡ್‌ಗೆ ಆಗಮಿಸುವರು. ಲಕ್ಷ್ಮೇಶ್ವರದ ಚಂದನ ಎಜ್ಯುಕೇಶನ್ ಸೊಸೈಟಿ ವತಿಯಿಂದ ಆಯೋಜಿಸಿರುವ ಭಾರತರತ್ನ ಪ್ರೊ. ಸಿ.ಎನ್.ಆರ್ ರಾವ್ 10ನೇ ವರ್ಷದ ವಿಜ್ಞಾನ ವಿಸ್ತ್ರತ ಕಾರ್ಯಕ್ರಮ–2025 ಹಾಗೂ ಬಿ.ಎಸ್. ಪಾಟೀಲ, ಭಾ.ಆ.ಸೇ (ನಿ) ಇವರಿಗೆ 2025ನೇ ಸಾಲಿನ ಪ್ರತಿಷ್ಠಿತ 'ಚಂದನ ಶ್ರೀ' ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಪಾಲ್ಗೊಳ್ಳುವರು. ನಂತರ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಭೆ ಜರುಗಿಸುವರು.



ಮಧ್ಯಾಹ್ನ 3 ಗಂಟೆಗೆ ಲಕ್ಷ್ಮೇಶ್ವರದ ಶ್ರೀ ಉಮಾ ಪಿ.ಯು ಕಾಲೇಜು ಮೈದಾನ ಹೆಲಿಪ್ಯಾಡ್‌ನಿಂದ ಹೆಲಿಕಾಪ್ಟರ್ ಮೂಲಕ ಹುಬ್ಬಳ್ಳಿಗೆ ತೆರಳಲಿದ್ದು, ಜಿಲ್ಲೆಗೆ ಆಗಮಿಸಿ ನಿರ್ಗಮಿಸುವವರೆಗೆ ಜಿಲ್ಲಾ ಮಟ್ಟದ ಎಲ್ಲ ಅಧಿಕಾರಿಗಳು ವಹಿಸಿದ ಜವಾಬ್ದಾರಿಯನ್ನು ಅಚ್ಚುಕಟ್ಟಾಗಿ ನಿಭಾಯಿಸುವಂತೆ ಸೂಚಿಸಿದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಮಾತನಾಡಿ, ಮುಖ್ಯಮಂತ್ರಿಗಳು ಸಂಚರಿಸುವ ಮಾರ್ಗಗಳು ಸುವ್ಯವಸ್ಥಿತವಾಗಿ ಇರುವಂತೆ ಹಾಗೂ ವಾಹನ ನಿಲುಗಡೆಗೆ ಸಾಕಷ್ಟು ಸ್ಥಳಾವಕಾಶ ಇರುವಂತೆ ಸೂಕ್ತ ವ್ಯವಸ್ಥೆ ಮಾಡಬೇಕು. ತುರ್ತು ವೈದ್ಯಕೀಯ ಚಿಕಿತ್ಸೆಗಾಗಿ ಸುಸಜ್ಜಿತ ವೈದ್ಯರ ತಂಡ ಇರುವಂತೆ ನೋಡಿಕೊಳ್ಳಬೇಕು ಎಂದರು. ಸಭೆಯಲ್ಲಿ ವೇದಿಕೆ, ಊಟ ಮತ್ತು ವಸತಿ ವ್ಯವಸ್ಥೆ, ಅಗ್ನಿಶಾಮಕ ವ್ಯವಸ್ಥೆ ಕುರಿತು ಚರ್ಚಿಸಿ ಸಂಬಂಧಿತ ಇಲಾಖಾಧಿಕಾರಿಗಳಿಗೆ ಹೊಣೆಗಾರಿಕೆಯನ್ನು ನೀಡಲಾಯಿತು.

ಈ ಸಂದರ್ಭದಲ್ಲಿ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಉಪವಿಭಾಗಾದಿಕಾರಿ ಗಂಗಪ್ಪ, ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕ ಆರ್.ಎಸ್. ಬುರುಡಿ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಮಸನಾಯಕ, ಜಿ.ಪಂ ಅಧಿಕಾರಿ ಎಂ.ವಿ. ಚಳಗೇರಿ, ಯುವಜನ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಶರಣು ಗೋಗೇರಿ, ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಎಸ್.ಎಸ್. ನೀಲಗುಂದ, ಮಹಿಳಾ ಮತ್ತು ಮಕ್ಕಳ ಅಭಿವೃಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕಿ ನಂದಾ ಹಣಬರಟ್ಟಿ, ವಾರ್ತಾಧಿಕಾರಿ ವಸಂತ ಮಡ್ಲೂರ, ಕೊಟ್ರೇಶ ವಿಭೂತಿ, ಡಾ. ಬಸವರಾಜ ಮಲ್ಲೂರ, ಎಂ.ಎಂ. ತುಂಬರಮಟ್ಟಿ, ಡಾ. ಬಸವರಾಜ ಬಳ್ಳಾರಿ, ಶ್ರೀನಿವಾಸ ಮೂರ್ತಿ ಕುಲಕರ್ಣಿ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಹಾಜರಿದ್ದರು.

> ಎಲ್ಲ ಇಲಾಖೆಯ ಅಧಿಕಾರಿಗಳು ಕಾರ್ಯಕ್ರಮ ಪ್ರಾರಂಭವಾಗುವುದಕ್ಕಿಂತ ಮುಂಚೆಯೇ ಕಡ್ಡಾಯವಾಗಿ ಹಾಜರಾಗಬೇಕು. ಮುಖ್ಯಮಂತ್ರಿಗಳ ಕಾರ್ಯಕ್ರಮದ ಸ್ಥಳದ ಸ್ವಚ್ಛತೆಗೆ ಹಾಗೂ ಸೂಕ್ತ ಬಂದೋಬಸ್ತ್‌ಗಾಗಿ ಕ್ರಮ ವಹಿಸಬೇಕು. ಕಾರ್ಯಕ್ರಮದ ಸ್ಥಳದಲ್ಲಿ ವಿದ್ಯುತ್ ಪೂರೈಕೆಯಲ್ಲಿ ಯಾವುದೇ ವ್ಯತ್ಯಯವಾಗದಂತೆ ಅಧಿಕಾರಿಗಳು ನಿಗಾ ವಹಿಸಬೇಕು. ಶುದ್ಧ ಕುಡಿಯುವ ನೀರಿನ ವ್ಯವಸ್ಥೆ, ಆಸನದ ವ್ಯವಸ್ಥೆ ಅಚ್ಚುಕಟ್ಟಾಗಿರುವಂತೆ ನೋಡಿಕೊಳ್ಳಬೇಕು. ಒಟ್ಟಾರೆಯಾಗಿ ಮುಖ್ಯಮಂತ್ರಿಗಳ ಜಿಲ್ಲಾ ಪ್ರವಾಸ ಕಾರ್ಯಕ್ರಮದಲ್ಲಿ ಯಾವುದೇ ಲೋಪದೋಷಗಳಾಗದಂತೆ ಇಲಾಖಾಧಿಕಾರಿಗಳು ಆಸಕ್ತಿಯಿಂದ ಕಾರ್ಯನಿರ್ವಹಿಸಬೇಕು ಎಂದು ಡಿಸಿ ಸಿ.ಎನ್. ಶ್ರೀಧರ್ ತಿಳಿಸಿದರು.

## ಮಾಜಿ ಐಪಿಎಸ್ ಅಧಿಕಾರಿ ಸಂಜೀವ್ ಭಟ್ ಜೈಲು ಶಿಕ್ಷೆ ಅಮಾನತು ಮನವಿ ನಿರಾಕರಿಸಿದ ಸುಪ್ರೀಂ ಕೋರ್ಟ್

■ವಿಜಯಸಾಕ್ಷಿ ಸುದ್ದಿ, ನವದೆಹಲಿ

1996 ರ ಮಾದಕ ದ್ರವ್ಯ ವಶ ಪ್ರಕರಣದಲ್ಲಿ ಮಾಜಿ ಐಪಿಎಸ್ ಅಧಿಕಾರಿ ಸಂಜೀವ್ ಭಟ್ ಅವರ 20 ವರ್ಷಗಳ ಜೈಲು ಶಿಕ್ಷೆಯನ್ನು ಅಮಾನತುಗೊಳಿಸಲು ಸುಪ್ರೀಂ ಕೋರ್ಟ್ ನಿರಾಕರಿಸಿದ್ದರಿಂದ ಗುರುವಾರ ಅವರ ಬಿಡುಗಡೆಗಾಗಿನ ಪ್ರಯತ್ನ ವಿಫಲವಾಯಿತು.

ನ್ಯಾಯಮೂರ್ತಿಗಳಾದ ಜೆ.ಕೆ. ಮಹೇಶ್ವರಿ ಮತ್ತು ವಿಜಯ್ ಬಿಷ್ಣೋಯ್ ಅವರ ಪೀಠವು ಭಟ್ ಅವರ ಮೇಲ್ಮನವಿಯನ್ನು ಸ್ವೀಕರಿಸಲು ನಿರಾಕರಿಸಿತು.

ಸುಮಾರು ಮೂರು ದಶಕಗಳ ಹಿಂದೆ ರಾಜಸ್ಥಾನ ಮೂಲದ ವಕೀಲ ಸುಮೇರ್‌ಸಿಂಗ್ ರಾಜಪುರೋಹಿತ್ ಅವರನ್ನು ನಕಲಿ ಮಾದಕವಸ್ತು ಪ್ರಕರಣದಲ್ಲಿ ಸಿಲುಕಿಸುವಲ್ಲಿ ಭಟ್ ಅವರ ಪಾತ್ರಕ್ಕಾಗಿ ಗುಜರಾತ್‌ನ ಪಾಲನ್‌ಪುರದ ಸೆಷನ್ಸ್ ನ್ಯಾಯಾಲಯವು ಭಟ್ ಅವರನ್ನು ದೋಷಿ ಎಂದು ಘೋಷಿಸಿತು. ಘಟನೆಯ ಸಮಯದಲ್ಲಿ, ಭಟ್ ಬನಸ್ಕಾಂತ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಯಾಗಿದ್ದರು. ಅವರ ಪೊಲೀಸ್ ತಂಡವು ಹೋಟೆಲ್ ಕೋಣೆಯಲ್ಲಿ ಮಾದಕ ದ್ರವ್ಯಗಳನ್ನು ಪತ್ತೆಹಚ್ಚಲಾಗಿದೆ ಎಂದು ಆರೋಪಿಸಿ ರಾಜ್‌ಪುರೋಹಿತ್ ಅವರನ್ನು ಬಂಧಿಸಿತು.

### ಶಾಸಕ ಡಾ. ಚಂದ್ರು ಲಮಾಣಿ ಸೇರಿದಂತೆ ನಾಲ್ವರ ವಿರುದ್ಧ ಪ್ರಕರಣ ದಾಖಲು

# ಕಾರ್ಯಕರ್ತನಿಗೆ ಧಮಕಿ ಹಾಕಿದರೇ ಶಾಸಕರು...?!

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಶಿರಹಟ್ಟಿ ಮತಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿ ಸೇರಿದಂತೆ ರಾಜು ಖಾನಪ್ಪನವರ, ಸಂತೋಷ ಕುರಿ ಮತ್ತು ಫಕ್ಕೀರೇಶ ರಟ್ಟಿಹಳ್ಳಿ ವಿರುದ್ಧ ದೌರ್ಜನ್ಯ, ದರ್ಪ ಹಾಗೂ ಜೀವ ಬೆದರಿಕೆ ಕುರಿತು ಶಿರಹಟ್ಟಿ ಪೊಲೀಸ್ ಠಾಣೆಯಲ್ಲಿ ಚನ್ನಪಟ್ಟಣ ಗ್ರಾಮದ ನಾಮದೇವ ಯಲ್ಲಪ್ಪ ಮಾಂಡ್ರೆ ಎಂಬುವರು ಪ್ರಕರಣ ದಾಖಲಿಸಿದ್ದಾರೆ.

ಡಿ.7ರಂದು ಯಲ್ಲಪ್ಪ ಮಾಂಡ್ರೆ ಎಂಬುವರು ತಮ್ಮ ಖಾಸಗಿ ಕೆಲಸದ ನಿಮಿತ್ತ ಶಿರಹಟ್ಟಿಯ ನಿರೀಕ್ಷಣಾ ಮಂದಿರಕ್ಕೆ ತೆರಳಿದ ಸಂದರ್ಭದಲ್ಲಿ



ಸಂಜೆ 7.27ರ ಸುಮಾರಿಗೆ ಮೊಬೈಲ್ ಮೂಲಕ ಶಾಸಕ ಡಾ. ಚಂದ್ರು ಲಮಾಣಿ ಮಾತನಾಡಿ, ಅವಾಚ್ಯ ಶಬ್ದಗಳನ್ನು ಬಳಕೆ ಮಾಡಿ, ನಿನ್ನ ಮೇಲೆ ಜಾತಿ ನಿಂದನೆ ಎಫ್‌ಐಆರ್ ಹಾಕಿ ಸ್ಟೇಶನ್ನಿಗೆ ಕರೆಸ್ತೀನಿ ಎಂದು ಜೀವ ಬೆದರಿಕೆ ಹಾಕಿದ್ದಾರೆ. ಸಣ್ಣ ವಿಚಾರ ದೊಡ್ಡದು ಮಾಡಬ್ಯಾಡ್ರಿ, ನಾನೇನಾದರೂ ತಪ್ಪು ಮಾತನಾಡಿದರೆ ಕ್ಷಮಿಸಿ ಅಂತಾ ಅಂಗಲಾಚಿ ಬೇಡಿಕೊಂಡೆ, ನಾನು ನಿಮ್ಮ ಪಕ್ಷದ ಕಾರ್ಯಕರ್ತ ಎಂದರೂ ಕೇಳಲಿಲ್ಲ. ಪುನಃ ಅವಾಚ್ಯ ಶಬ್ದಗಳಿಂದ ಬೈದು, ಪದೇ ಪದೇ ಕರೆ ಮಾಡಿ ಚನ್ನಪಟ್ಟಣಕ್ಕೆ ಬಂದು ಎತ್ತಿಕೊಂಡು ಬರುತ್ತೇನೆ ಎಂದು ಬೆದರಿಕೆ ಹಾಕಿದ್ದಾರೆ ಎಂದು ನಾಮದೇವ ಯಲ್ಲಪ್ಪ ಮಾಂಡ್ರೆ ಉಲ್ಲೇಖಿಸಿದ್ದಾರೆ.

ಪ್ರಕರಣವು ಎನ್‌ಸಿ ಸ್ವರೂಪದ್ದಾಗಿರುವುದರಿಂದ ಸಿಜೆ ಮತ್ತು ಜೆಎಂಎಫ್‌ಸಿ ನ್ಯಾಯಾಲಯ ಲಕ್ಷ್ಮೇಶ್ವರದ ಅನುಮತಿಯೊಂದಿಗೆ ಪ್ರಕರಣ ದಾಖಲಿಸಿ ಶಿರಹಟ್ಟಿ ಪೊಲೀಸರು ತನಿಖೆ ಕೈಗೊಂಡಿದ್ದಾರೆ.

> ಪಕ್ಷದ ಕಾರ್ಯಕರ್ತನಾದ ನನಗೇ ಹೀಗಾಗಿದ್ದು, ಇನ್ನು ಜನಸಾಮಾನ್ಯರಿಗೆ ಹೇಗಾಗಬಾರದು ಎಂಬುವುದು ಯಕ್ಷ ಪ್ರಶ್ನೆಯಾಗಿದೆ. ಇಂತಹ ಶಾಸಕರು ಕೂಡಲೇ ರಾಜೀನಾಮೆ ಕೊಡಬೇಕು, ಅವರ ಬೆಂಬಲಿಗರು ಒತ್ತಡ ಹಾಕಿ, ನಮ್ಮ ಮಾತು ಕೇಳದಿದ್ದರೆ ಪರಿಣಾಮ ಕೆಟ್ಟದಾಗಿರುತ್ತದೆ ಎಂದು ಎಚ್ಚರಿಕೆ ನೀಡುತ್ತಿದ್ದು, ನನ್ನ ಜೊತೆ ಮಾತನಾಡಿದ ಆಡಿಯೋ ರೆಕಾರ್ಡಿಂಗ್ ನನ್ನ ಬಳಿ ಇದೆ. ನನಗೆ ಅಥವಾ ನನ್ನ ಕುಟುಂಬಕ್ಕೆ ಏನಾದರೂ ತೊಂದರೆಯಾದರೆ ನೇರವಾಗಿ ಶಾಸಕ ಡಾ. ಚಂದ್ರು ಲಮಾಣಿ ಹಾಗೂ ಅವರ ಬೆಂಬಲಿಗರೇ ಕಾರಣ. ನನ್ನ ಜೀವ ರಕ್ಷಣೆ ಕುರಿತು ಭದ್ರತೆ ಒದಗಿಸಬೇಕೆಂದು ಎಫ್‌ಐಆರ್‌ನಲ್ಲಿ ನಾಮದೇವ ಯಲ್ಲಪ್ಪ ಮಾಂಡ್ರೆ ಉಲ್ಲೇಖಿಸಿದ್ದಾರೆ.

### ಅಖಿಲ ಭಾರತ ಪಂಚಾಯತ್ ಪರಿಷತ್‌ನ 18ನೇ ರಾಷ್ಟ್ರೀಯ ಸಮ್ಮೇಳನ ಡಿ.13, 14ಕ್ಕೆ

## ಸಿಎಂ ಸಿದ್ದರಾಮಯ್ಯರಿಂದ ಸಮ್ಮೇಳನ ಉದ್ಘಾಟನೆ

■ವಿಜಯಸಾಕ್ಷಿ ಸುದ್ದಿ, ಗದಗ

ಕರ್ನಾಟಕ ಪಂಚಾಯತ್ ರಾಜ್ ಪರಿಷತ್ ಬೆಂಗಳೂರು ಹಾಗೂ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಗದಗ ಇವರ ಸಹಯೋಗದೊಂದಿಗೆ ಗ್ರಾಮೀಣಾಬಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಾಯೋಜಕತ್ವದಲ್ಲಿ ಅಖಿಲ ಭಾರತ ಪಂಚಾಯತ್ ಪರಿಷತ್‌ನ 18ನೇ ರಾಷ್ಟ್ರೀಯ ಸಮ್ಮೇಳನವನ್ನು ಡಿ. 13 ಮತ್ತು 14ರಂದು ನಾಗಾವಿಯ ಮ.ಗಾಂ.ಗ್ರಾ ಮತ್ತು ಪಂ.ರಾಜ್ ವಿಶ್ವವಿದ್ಯಾಲಯದ ಗ್ರಾಮ ಗಂಗೋತ್ರಿ ಆವರಣ ಕೌಶಲ್ಯ ವಿಕಾಸ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ. ಡಿ. 13ರಂದು ಬೆಳಿಗ್ಗೆ 10.30ಕ್ಕೆ ಅಖಿಲ ಭಾರತ ಪಂಚಾಯತ್ ಪರಿಷತ್‌ನ 18ನೇ ರಾಷ್ಟ್ರೀಯ ಸಮ್ಮೇಳನದ ಉದ್ಘಾಟನೆಯು ನಾಗಾವಿಯ ಮ.ಗಾಂ.ಗ್ರಾ. ಮತ್ತು ಪಂ. ರಾಜ್ ವಿಶ್ವವಿದ್ಯಾಲಯದ ಗ್ರಾಮ ಗಂಗೋತ್ರಿ ಆವರಣ ಕೌಶಲ್ಯ ವಿಕಾಸ ಭವನದಲ್ಲಿ ಜರುಗಲಿದೆ. ಮುಖ್ಯಮಂತ್ರಿ ಸಿದ್ದರಾಮಯ್ಯ ಸಮ್ಮೇಳನವನ್ನು ಉದ್ಘಾಟಿಸಲಿದ್ದಾರೆ. ವಿಧಾನ ಪರಿಷತ್ ಸಬಾಪತಿ ಬಸವರಾಜ ಹೊರಟ್ಟಿ ಕಾರ್ಯಕ್ರಮದ ಘನ ಉಪಸ್ಥಿತಿ ವಹಿಸಲಿದ್ದಾರೆ. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಮತ್ತು ಐಟಿ–ಬಿಟಿ ಸಚಿವರು ಹಾಗೂ ಗಾಂ. ಗ್ರಾ ಮತ್ತು ಪಂಚಾಯತ್ ರಾಜ್ ವಿಶ್ವ ವಿದ್ಯಾಲಯ ಸಹ ಕುಲಾಧಿಪತಿ ಪ್ರಿಯಾಂಕ್ ಖರ್ಗೆ ಅವರು ವಿಶ್ವ ವಿದ್ಯಾಲಯದ ಶಾಲಾ ಕಟ್ಟಡವನ್ನು ಉದ್ಘಾಟಿಸುವರು. ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಅತಿಥಿಗಳಾಗಿ ಮಾಜಿ ಮುಖ್ಯಮಂತ್ರಿ ಹಾಗೂ ಸಂಸದರಾದ ಬಸವರಾಜ ಬೊಮ್ಮಾಯಿ, ಸರ್ಕಾರಿ ಮುಖ್ಯ ಸಚೇತಕರು ಹಾಗೂ ವಿಧಾನ ಪರಿಷತ್ ಶಾಸಕ ಸಲೀಂ ಅಹ್ಮದ್, ಕರ್ನಾಟಕ ಖನಿಜ ಅಭಿವೃದ್ಧಿ ನಿಗಮ ನಿಯಮಿತ ಅಧ್ಯಕ್ಷರು ಹಾಗೂ ರೋಣ ಶಾಸಕ ಜಿ.ಎಸ್. ಪಾಟೀಲ, 5ನೇ ರಾಜ್ಯ ಹಣಕಾಸು ಆಯೋಗದ ಅಧ್ಯಕ್ಷರು ಹಾಗೂ ಮಾಜಿ ಸಂಸದ ಡಾ. ಸಿ.ನಾರಾಯಣಸ್ವಾಮಿ, ಸಂಸದ ಪಿ.ಸಿ. ಗದ್ದಿಗೌಡರ, ಕರ್ನಾಟಕ ರಾಜ್ಯ ವಿಕೇಂದ್ರೀಕರಣ ಯೋಜನೆ ಮತ್ತು ಅಭಿವೃದ್ಧಿ ಸಮಿತಿ ಉಪಾಧ್ಯಕ್ಷ ಡಿ.ಆರ್. ಪಾಟೀಲ, ನರಗುಂದ ಶಾಸಕ ಸಿ.ಸಿ. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ವಿಧಾನಪರಿಷತ್ ಶಾಸಕ ಎಸ್.ವಿ. ಸಂಕನೂರ, ಪ್ರದೀಪ ಶೆಟ್ಟರ, ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ನಾಗಾವಿ ಗ್ರಾ.ಪಂ ಅಧ್ಯಕ್ಷ ಉಳವೆಪ್ಪ ಬಿ.ಶಿಗ್ಲಿ, ಕಳಸಾಪುರ ಗ್ರಾ.ಪಂ ಅಧ್ಯಕ್ಷೆ ಅನುಸೂಯಾ ಬಿ.ಬೆಟಗೇರಿ, ಅಸುಂಡಿ ಗ್ರಾ.ಪಂ ಅಧ್ಯಕ್ಷ ಅಲ್ತಾಫ್ ಎ.ಕಾಗದಗಾರ ಆಗಮಿಸುವರು. ಅತಿಥಿಗಳಾಗಿ ಅಖಿಲ ಭಾರತ ಪಂಚಾಯತ್ ಪರಿಷತ್ ಅಧ್ಯಕ್ಷ ಮತ್ತು ಮಾಜಿ ಕೇಂದ್ರ ಸಚಿವ ಸುಬೋಧ್ ಕಾಂತ್ ಸಹಾಯ್, ಅಖಿಲ ಭಾರತ ಪಂಚಾಯತ್ ಪರಿಷತ್ ಕಾರ್ಯಾಧ್ಯಕ್ಷ ಡಾ. ಅಶೋಕ ಚೌಹಾಣ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ನಿವೃತ್ತ ಪ್ರಧಾನ ಕಾರ್ಯದರ್ಶಿ ಡಾ. ಎಸ್.ಎಸ್. ಮೀನಾಕ್ಷಿ ಸುಂದರಮ್ ಆಗಮಿಸುವರು. ಮ.ಗಾಂ.ಗ್ರಾ ಮತ್ತು ಪಂ.ರಾಜ್ ವಿ.ವಿ ಕುಲಸಚಿವರು ಹಾಗೂ ಕುಲಪತಿ (ಪ್ರ) ಪ್ರೊ. ಡಾ. ಸುರೇಶ ನಾಡಗೌಡರ, ಕ.ಪಂ.ರಾ.ಪ ಕಾರ್ಯಾಧ್ಯಕ್ಷ ವಿ.ವೈ. ಘೋರ್ಪಡೆ, ಕ.ಪಂ.ರಾ.ಪ ಉಪಾಧ್ಯಕ್ಷರಾದ ವಿ.ಎಸ್. ಪಾಟೀಲ, ಸೌಭಾಗ್ಯ ಬಸವರಾಜನ್, ಮ.ಗಾಂ.ಗ್ರಾ ಮತ್ತು ಪಂಚಾಯತ್ ರಾಜ್ ವಿ.ವಿ ಹಣಕಾಸು ಅಧಿಕಾರಿ ಪ್ರಶಾಂತ್ ಜೆ.ಸಿ, ಕೆ.ಪಿ.ಆರ್.ಪಿ ಪ್ರಧಾನ ಕಾರ್ಯದರ್ಶಿ ಸತೀಶ್ ಕೆ.ಎಸ್ ಸರ್ವರಿಗೂ ಸ್ವಾಗತ ಕೋರಿದ್ದಾರೆ.

> ವಿಶೇಷ ಆಹ್ವಾನಿತರಾಗಿ ಗ್ರಾ. ಮತ್ತು ಪಂ.ರಾಜ್ ಇಲಾಖೆ ಕಾರ್ಯದರ್ಶಿ ಸಮೀರ್ ಶುಕ್ಲಾ, ಗ್ರಾ. ಮತ್ತು ಪಂ.ರಾಜ್ ಇಲಾಖೆ ಕಾರ್ಯದರ್ಶಿ ರಂದೀಪ್ ಡಿ, ಗದಗ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ರಮಣದೀಪ್ ಚೌಧರಿ, ಬೆಳಗಾವಿ ವಿಭಾಗದ ಪ್ರಾದೇಶಿಕ ಆಯುಕ್ತರಾದ ಜಾನಕಿ ಕೆ.ಎಂ, ಕ.ಪಂ.ರಾಜ್ ಆಯುಕ್ತಾಲಯದ ಆಯುಕ್ತೆ ಡಾ. ಅರುಂಧತಿ ಚಂದ್ರಶೇಖರ, ಜಿಲ್ಲಾಧಿಕಾರಿ ಹಾಗೂ ಜಿ.ಪಂ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್ ಆಗಮಿಸುವರು.

## ಖಾಲಿ ಇರುವ ಹುದ್ದೆಗಳ ಭರ್ತಿಗೆ ಸಮ್ಮತಿ : ಸಿಎಂ

■ವಿಜಯಸಾಕ್ಷಿ ಸುದ್ದಿ, ಬೆಳಗಾವಿ–ಸುವರ್ಣಸೌಧ

ಒಳ ಮೀಸಲಾತಿ ನೀಡುವ ಬಗ್ಗೆ ಈಗಾಗಲೇ ತೀರ್ಮಾನವಾಗಿದ್ದು, ಸರ್ಕಾರದ ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳ ಭರ್ತಿಗೆ ಶೀಘ್ರ ಕ್ರಮವಹಿಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದರು.

ಪರಿಷತ್ತಿನಲ್ಲಿ ಪ್ರಶ್ನೋತ್ತರದ ವೇಳೆ ಸದಸ್ಯ ನಿರಾಣಿ ಹನುಮಂತಪ್ಪ ರುದ್ರಪ್ಪ ಅವರ ಪ್ರಶ್ನೆಗೆ ಪ್ರತಿಕ್ರಿಯಿಸಿದ ಮುಖ್ಯಮಂತ್ರಿಗಳು, 2025–26ನೇ ಸಾಲಿನಲ್ಲಿ ಇಲಾಖಾವಾರು ರಾಜ್ಯದ ವಿವಿಧ ಇಲಾಖೆಗಳಲ್ಲಿ 2,84,881 ಹುದ್ದೆಗಳು ಖಾಲಿ ಇವೆ. ವಿವಿಧ ನಿಗಮ ಮತ್ತು ಮಂಡಳಿಗಳಲ್ಲಿ ಗುತ್ತಿಗೆ ಹಾಗೂ ಹೊರಗುತ್ತಿಗೆ ಸೇರಿ 1,01,420 ಹುದ್ದೆಗಳು ಖಾಲಿ ಇವೆ. ರಾಜ್ಯದ ವಿವಿಧ ವಿಶ್ವವಿದ್ಯಾಲಯಗಳಲ್ಲಿ 14,677 ಹುದ್ದೆಗಳು ಖಾಲಿ ಇವೆ.

ಖಾಲಿ ಇರುವ ಒಟ್ಟು 2,84,881 ಹುದ್ದೆಗಳ ಪೈಕಿ ಗುತ್ತಿಗೆ ಹಾಗೂ ಹೊರಗುತ್ತಿಗೆ ಎರಡೂ ಸೇರಿ 96,844 ಹುದ್ದೆಗಳನ್ನು ಈಗಾಗಲೇ ಭರ್ತಿ ಮಾಡಿದ್ದು, ಇನ್ನುಳಿದ 1,88,037 ಹುದ್ದೆಗಳನ್ನು ಹಂತಹಂತವಾಗಿ ಭರ್ತಿ ಮಾಡಲಾಗುವುದು. ಈ ಪೈಕಿ 2023–24ರಿಂದ 2024–25ರವರೆಗೆ ಗ್ರೂಪ್ ಎ 562, ಗ್ರೂಪ್ ಬಿ 619, ಗ್ರೂಪ್ ಸಿ 23,119 ಸೇರಿ ಒಟ್ಟು 24,300 ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯಿಂದ ಮಂಜೂರಾತಿ ಸಿಕ್ಕಿದೆ ಎಂದು ತಿಳಿಸಿದರು.

ಆರ್ಥಿಕ ಇಲಾಖೆಯಿಂದ ಒಪ್ಪಿಗೆ ದೊರೆತ 24,300 ಹುದ್ದೆಗಳು ಮತ್ತು 371(ಜೆ) ಮೀಸಲು ಸೌಕರ್ಯ ಇರುವ ಕಲ್ಯಾಣ ಕರ್ನಾಟಕ ಭಾಗದಲ್ಲಿ ಭರ್ತಿಯಾಗಬೇಕಾದ 32,132 ಹುದ್ದೆಗಳು ಸೇರಿ ಒಟ್ಟು 56,132 ಹುದ್ದೆಗಳ ಭರ್ತಿ ಪ್ರಕ್ರಿಯೆ ಈಗ ರಾಜ್ಯದಲ್ಲಿ ನಡೆಯುತ್ತಿದೆ ಎಂದು ಅವರು ತಿಳಿಸಿದರು.

ಖಾಲಿ ಇರುವ ಹುದ್ದೆಗಳ ಭರ್ತಿಗೆ ಆಗ್ರಹಿಸಿ ಧಾರವಾಡ ಸೇರಿದಂತೆ ವಿವಿಧೆಡೆ ಪ್ರತಿಭಟನೆಗಳು ನಡೆಯುತ್ತಿದ್ದು, ಖಾಲಿ ಹುದ್ದೆಗಳ ಭರ್ತಿಗೆ ಮೊದಲ ಆದ್ಯತೆ ನೀಡಿ ವಿದ್ಯಾರ್ಥಿ–ಯುವಜನರಿಗೆ ನ್ಯಾಯ ಒದಗಿಸಬೇಕು ಎಂದು ಪರಿಷತ್ತಿನ ವಿರೋಧ ಪಕ್ಷದ ನಾಯಕರಾದ ಛಲವಾದಿ ನಾರಾಯಣಸ್ವಾಮಿ ಮನವಿ ಮಾಡಿದರು.

## ನಾಳೆ ಬಸವರಾಜ ಹೊರಟ್ಟಿಯವರಿಗೆ ಸನ್ಮಾನ

■ವಿಜಯಸಾಕ್ಷಿ ಸುದ್ದಿ, ಗದಗ

ಪಶ್ಚಿಮ ಶಿಕ್ಷಕರ ಮತಕ್ಷೇತ್ರದಿಂದ ಸತತ ಎಂಟು ಬಾರಿ ವಿಧಾನ ಪರಿಷತ್ ಸದಸ್ಯರಾಗಿ ಆಯ್ಕೆಯಾಗಿ ವಿಶ್ವ ದಾಖಲೆ ನಿರ್ಮಿಸಿರುವ ಬಸವರಾಜ ಹೊರಟ್ಟಿ ಅವರಿಗೆ ಡಿ. 13ರಂದು ಸಂಜೆ 4 ಗಂಟೆಗೆ ಹುಬ್ಬಳ್ಳಿಯ ನೆಹರೂ ಮೈದಾನದಲ್ಲಿ ಗೌರವ ಸನ್ಮಾನ ಸಮಾರಂಭವನ್ನು ಹಮ್ಮಿಕೊಳ್ಳಲಾಗಿದೆ ಎಂದು ಕನಕದಾಸ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ರವಿ ದಂಡಿನ ಹೇಳಿದರು.



ನಗರದ ಪತ್ರಿಕಾ ಭವನದಲ್ಲಿ ಗುರುವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಸವರಾಜ ಹೊರಟ್ಟಿಯವರು ನಿರಂತರವಾಗಿ ಶಿಕ್ಷಕರ ಧ್ವನಿಯಾಗಿ ಕಾರ್ಯನಿರ್ವಹಿಸಿದ್ದಾರೆ. ಶಾಲಾ ಶಿಕ್ಷಣ ಸಂಸ್ಥಾಪಕರಿಗೆ ಮಾರ್ಗದರ್ಶನ ನೀಡುವ ಮೂಲಕ ಅನೇಕ ಶಾಲಾ–ಕಾಲೇಜುಗಳ ಅಭಿವೃದ್ಧಿಗೆ ಕಾರಣರಾಗಿದ್ದಾರೆ. ಹೊರಟ್ಟಿ ಅವರ ಗೌರವ ನಮನ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ. ಧರ್ಮಸ್ಥಳದ ಧರ್ಮಾಧಿಕಾರಿ ಡಾ. ವೀರೇಂದ್ರ ಹೆಗ್ಗಡೆ ಅವರು ದಿವ್ಯ ಸಾನ್ನಿಧ್ಯ ವಹಿಸುವರು.

ಕೇಂದ್ರ ಸಚಿವ ಪ್ರಹ್ಲಾದ ಜೋಶಿ, ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ ಹಾಗೂ ಸಭಾಧ್ಯಕ್ಷ ಯು.ಟಿ. ಖಾದರ್ ಅವರು ಬಸವರಾಜ ಹೊರಟ್ಟಿಯವರನ್ನು ಸನ್ಮಾನಿಸಲಿದ್ದಾರೆ. ಕಾರ್ಯಕ್ರಮದ ಅಧ್ಯಕ್ಷತೆಯನ್ನು ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ್ ವಹಿಸಿಕೊಳ್ಳಲಿದ್ದಾರೆ. ಕಾರ್ಯಕ್ರಮದಲ್ಲಿ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ, ಜಗದೀಶ ಶೆಟ್ಟರ್, ಬಸವರಾಜ ಬೊಮ್ಮಾಯಿ ಸೇರಿದಂತೆ ರಾಜ್ಯದ ಅನೇಕ ಗಣ್ಯರು ಭಾಗವಹಿಸಲಿದ್ದಾರೆ ಎಂದು ರವಿ ದಂಡಿನ ವಿವರಿಸಿದರಲ್ಲದೆ, ಗದಗ ಜಿಲ್ಲೆಯಿಂದ ಶಿಕ್ಷಕರು ಹಾಗೂ ಅವರ ಅಭಿಮಾನಿಗಳು ಹೆಚ್ಚಿನ ಸಂಖ್ಯೆಯಲ್ಲಿ ಕಾರ್ಯಕ್ರಮಕ್ಕೆ ಆಗಮಿಸಿ ಯಶಸ್ವಿಗೊಳಿಸಬೇಕು ಎಂದು ವಿನಂತಿಸಿದರು.

ಮಾಧ್ಯಮಿಕ ಶಾಲಾ ನೌಕರರ ಸಂಘದ ಅಧ್ಯಕ್ಷ ಎಂ.ಕೆ. ಲಮಾಣಿ ಮಾತನಾಡಿ, ಬಸವರಾಜ ಹೊರಟ್ಟಿ ಅವರು ಶಿಕ್ಷಕರ ಪಾಲಿಗೆ ಭರವಸೆಯಾಗಿದ್ದಾರೆ. ಅವರ ನಿಷ್ಠೆ, ನೈತಿಕತೆ ಮತ್ತು ನಾಯಕತ್ವದ 45 ವರ್ಷದ ಪಯಣದ ಕಾರ್ಯಕ್ರಮದಲ್ಲಿ ಎಲ್ಲರೂ ಭಾಗಿಯಾಗೋಣ ಎಂದು ಕರೆ ನೀಡಿದರು.

ಪತ್ರಿಕಾಗೋಷ್ಠಿಯಲ್ಲಿ ಉಮೇಶ ಹಿರೇಮಠ, ಎ.ಎಸ್. ಪಾಟೀಲ, ಬೂದಪ್ಪ ಅಂಗಡಿ, ಬಿ.ಕೆ. ನಿಂಬನಗೌಡ್ರ, ಗಿರೀಶ ನರಗುಂದ, ಎ.ಎಸ್. ಪಾಟೀಲ ಮುಂತಾದವರಿದ್ದರು.

'ಬಂಧಮುಕ್ತ' ಸಿನಿಮಾ ಟ್ರೈಲರ್ ಬಿಡುಗಡೆಗೊಳಿಸಿದ ಗಿರೀಶ್ ಕಾಸರವಳ್ಳಿ

# 'ಬಂಧಮುಕ್ತ' ಸಮಾಜಕ್ಕೆ ಮಾದರಿಯಾಗಬಲ್ಲದು




**■ವಿಜಯಸಾಕ್ಷಿ ಸುದ್ದಿ, ಹುಬ್ಬಳ್ಳಿ**

ಸಮರ್ಥ ಫಿಲ್ಮ್ಸ್ ಬ್ಯಾನರ್ ಅಡಿಯಲ್ಲಿ ನಿರ್ಮಾಣವಾದ ಪತ್ರಕರ್ತ, ಲೇಖಕ ಕುಮಾರ ಬೇಂದ್ರೆ ನಿರ್ದೇಶನದ 'ಬಂಧಮುಕ್ತ' ಚಲನಚಿತ್ರದ ಟ್ರೈಲರ್‌ನ್ನು ಹಿರಿಯ ನಿರ್ದೇಶಕರಾದ ಪದ್ಮಶ್ರೀ ಗಿರೀಶ್ ಕಾಸರವಳ್ಳಿ ಅವರು ಬೆಂಗಳೂರಿನ ತಮ್ಮ ನಿವಾಸದಲ್ಲಿ ಆಯೋಜಿಸಿದ್ದ ಕಾರ್ಯಕ್ರಮದಲ್ಲಿ ಬಿಡುಗಡೆ ಮಾಡಿದರು. ನಂತರ ಮಾತನಾಡಿದ ಅವರು, ಸಮಾಜಕ್ಕೆ ಉತ್ತಮ ಹಾಗೂ ಆರೋಗ್ಯಪೂರ್ಣ ಸಂದೇಶ ನೀಡುವಂತಹ ಚಲನಚಿತ್ರವನ್ನು ಕುಮಾರ ಬೇಂದ್ರೆ ನಿರ್ದೇಶನ ಮಾಡಿದ್ದಾರೆ. ಪುರುಷನ ದಬ್ಬಾಳಿಕೆ ಮತ್ತು ಸಂಕೋಲೆಗಳ ವಿರುದ್ಧ ದಿಟ್ಟ ಯುವತಿಯೊಬ್ಬಳು ಹೋರಾಟ ಮಾಡಿ, ತನ್ನ ಬದುಕನ್ನು ಸಂಕೋಲೆಯಿಂದ ಮುಕ್ತಗೊಳಿಸುವ ಈ ಚಿತ್ರದ ಕಥೆಯು ಸಮಾಜಕ್ಕೆ ಮಾದರಿ ಆಗಬಲ್ಲದು ಎಂದರು. ಚಿತ್ರದ ನಿರ್ಮಾಪಕ ಶಿವಪುತ್ರಪ್ಪ ಆರ್.ಆಶಿ ಅವರು ಗಿರೀಶ್ ಕಾಸರವಳ್ಳಿ ಅವರನ್ನು ಸನ್ಮಾನಿಸಿ ಗೌರವಿಸಿದರು. ಈ ಸಂದರ್ಭದಲ್ಲಿ ನಿರ್ದೇಶಕ ಕುಮಾರ ಬೇಂದ್ರೆ, ಚಿತ್ರದ ಕಲಾವಿದರಾದ ಐಶ್ವರ್ಯ ನಾಗರಾಜ, ರಿತಿಕಾ ಯಲ್ಲಪ್ಪ, ಮಂಜುನಾಥಗೌಡ ಪಾಟೀಲ, ಸನತ್ ಹಾಗೂ ಚಿತ್ರದ ತಂತ್ರಜ್ಞರು ಉಪಸ್ಥಿತರಿದ್ದರು.ತಾಂತ್ರಿಕ ವರ್ಗದಲ್ಲಿ ಛಾಯಾಗ್ರಹಣ ವಿಘ್ನೇಶ್ ಮಲಚಮಿ, ಕಥೆ ಶಿವಪುತ್ರಪ್ಪ ಆರ್. ಆಶಿ, ಸಂಕಲನ ಸತ್ಯಜಿತ್, ಎಫೆಕ್ಟ್ಸ್ ಮತ್ತು ಶಬ್ದ ವಿನ್ಯಾಸ ಶ್ರೀರಾಮ್, ಹಿನ್ನೆಲೆ ಸಂಗೀತ ಬಹುರೂಪಿ, ಗೀತರಚನೆ ಶಿವಪುತ್ರಪ್ಪ ಆಶಿ, ಕುಮಾರ ಬೇಂದ್ರೆ, ಸಂಗೀತ ಡಾ. ಸಿದ್ದೇಶ್ವರ ಕಟಕೋಳ, ಗಾಯಕಿ ರಾಧಿಕಾ ಕುಲಕರ್ಣಿ, ವಸ್ತ್ರಾಲಂಕಾರ ರಾಜೇಶ್, ಶೀರ್ಷಿಕೆ ಮತ್ತು ಪ್ರಚಾರ ವಿನ್ಯಾಸ ಪ್ರಕೃತಿ ಕ್ರಿಯೇಷನ್ಸ್, ಪತ್ರಿಕಾ ಸಂಪರ್ಕ ಡಾ. ಪ್ರಭು ಗಂಜಿಹಾಳ, ಡಾ. ವೀರೇಶ ಹಂಡಿಗಿ ನಿರ್ವಹಿಸಿದ್ದಾರೆ. ಸಹಾಯಕ ನಿರ್ದೇಶನ ಚೇತನ್, ಚಿತ್ರಕಥೆ–ಸಂಭಾಷಣೆ–ಜೊತೆಗೆ ನಿರ್ದೇಶನವನ್ನು ಕುಮಾರ ಬೇಂದ್ರೆ ಮಾಡಿದ್ದಾರೆ. ನಿರ್ಮಾಣ ಶಿವಪುತ್ರಪ್ಪ ಆರ್.ಆಶಿ, ಸಹ ನಿರ್ಮಾಪಕರು ರಾಜೀವ ಎಸ್. ಆಶಿ, ವಿನಯ ಎಸ್. ಆಶಿ ಆಗಿದ್ದಾರೆ.

ಪ್ರಮುಖ ಪಾತ್ರಗಳಲ್ಲಿ 'ಯಜಮಾನ' ಧಾರಾವಾಹಿ ಖ್ಯಾತಿಯ ಐಶ್ವರ್ಯ ನಾಗರಾಜ್ ಮತ್ತು ಈಗಾಗಲೇ ಹಲವು ಚಿತ್ರಗಳಲ್ಲಿ ಪ್ರಮುಖ ಪಾತ್ರ ನಿರ್ವಹಿಸಿದ ಸನತ್ ಎಸ್ ಅಭಿನಯಿಸಿದ್ದಾರೆ. ಇತರ ಪಾತ್ರಗಳಲ್ಲಿ ರಿತಿಕಾ ಯಲ್ಲಪ್ಪ, ಮಂಜುನಾಥ ಪಾಟೀಲ, ಅಕ್ಷತಾ ಕಮ್ಮಾರ, ಸಂತೋಷ ಬೆಂಗೇರಿ, ಪ್ರೇಮಾ ನಡುವಿನಮನಿ, ಶಾಂತಾ ಆಚಾರ್ಯ, ಡಾ. ಶಿವ ಮುಲ್ಕಿಪಾಟೀಲ, ಆನಂದ ಮಂಟೂರ, ವಿನಯ ದಂಡಗಿ, ಗೌತಮತಾಂಬೆ ಅಭಿನಯಿಸಿದ್ದಾರೆ.

ಶೀತ, ಕೆಮ್ಮು ಪ್ರಕರಣಗಳ ಹೆಚ್ಚಳ । ಬೆಳೆಗಳಿಗೆ ರೋಗಬಾಧೆ । ಚಳಿ ಮುಂದುವರಿಕೆ ಸಾಧ್ಯತೆ

# ಶೀತ ಗಾಳಿಗೆ ಜನತೆ ತತ್ತರ

ಗದಗ ಜಿಲ್ಲೆಯ ಮುಂಡರಗಿ ತಾಲೂಕಿನಲ್ಲಿ ಮತ್ತು ಡಂಬಳ ಹೋಬಳಿಯ ಗ್ರಾಮಗಳಲ್ಲಿ ಕೆರೆಗಳು ತುಂಬಿರುವ ಕಾರಣ, ಚಳಿಗಾಲದ ಸಮಯವಷ್ಟೇ ಅಲ್ಲದೆ, ಇನ್ನೊಂದು ಕಡೆ ದಿತ್ವಾ ಚಂಡಮಾರುತದ ಅಬ್ಬರದಿಂದಾಗಿ ಶೀತ ವಾತಾವರಣದಿಂದಾಗಿ ಚಳಿಯ ತೀವ್ರತೆ ಇನ್ನೂ ಕೆಲವು ದಿನ ಮುಂದುವರಿಯುವ ಸಾಧ್ಯತೆ ಇದೆ.

ತಾಪಮಾನದಲ್ಲಿ ಏರಿಕೆ–ಇಳಿಕೆಗಳಿಂದ ಮಕ್ಕಳು ಹೆಚ್ಚು ರೋಗ ಬಾಧಿತರಾಗಿದ್ದಾರೆ. ಜ್ವರ, ಕೆಮ್ಮು, ನೆಗಡಿ, ಗಂಟಲು ನೋವು, ವೃದ್ಧರಲ್ಲಿ ಅಸ್ತಮಾ ತೊಂದರೆಗಳು ಹೆಚ್ಚಾಗಿವೆ. ತಂಪಾದ ಗಾಳಿ ಮತ್ತು ಹೆಚ್ಚು ತೇವಾಂಶವು ಸೋಂಕಿಗೆ ಕಾರಣವಾಗಿದೆ ಎಂದು ವೈದ್ಯರು ತಿಳಿಸಿದ್ದಾರೆ. ಪೋಷಕರು ಮುಂಜಾನೆ ಸಂಜೆ ವೇಳೆ ಮಕ್ಕಳಿಗೆ ಬೆಚ್ಚಗಿನ ಬಟ್ಟೆ ಮತ್ತು ಬಿಸಿ ನೀರು ನೀಡುವಂತೆ ಸಲಹೆ ಕೂಡಾ ನೀಡಲಾಗಿದೆ.



ಹಿರಿಯರಲ್ಲಿ ಆರೋಗ್ಯ ಸಂಕಷ್ಟ: ವಯಸ್ಕರಲ್ಲಿ ಕಫದ ಸಮಸ್ಯೆ, ಸೈನಸ್, ರಕ್ತದ ಒತ್ತಡದಲ್ಲಿ ವ್ಯತ್ಯಾಸ ಕಾಣಿಸಿಕೊಳ್ಳುತ್ತಿದೆ. ಮಧುಮೇಹ, ಹೃದಯರೋಗಿಗಳು ಹೆಚ್ಚಾಗಿ ಎಚ್ಚರಿಕೆ ವಹಿಸುವುದು ಅಗತ್ಯ. ಹಿರಿಯರಿಗೆ ಚಳಿಯ ಸಮಯದಲ್ಲಿ ಹೆಚ್ಚು ಅಪಾಯಕಾರಿಯಾಗಿದೆ. ಕೈಕಾಲು ಜೋಮು ಹಿಡಿಯುವುದು, ಮೂಳೆ ನೋವು, ಎದೆ ಬಿಗಿತ ಮತ್ತು ಉಸಿರಾಟದ ತೊಂದರೆಗಳು ಹೆಚ್ಚಾಗುತ್ತಿವೆ. ಅದರಲ್ಲೂ ಮುಂಜಾನೆ 3.30ರಿಂದ 6 ಗಂಟೆ ಸಮಯ ಹೆಚ್ಚು ಎಚ್ಚರಿಕೆಯಿಂದ ಇರಬೇಕಾಗಿದೆ. ತಾಪಮಾನ ತೀವ್ರವಾಗಿ ಕುಸಿಯುವುದರಿಂದ ಹೃದಯಾಘಾತದ ಪ್ರಕರಣಗಳ ಸಾಧ್ಯತೆಯೂ ಹೆಚ್ಚು ಎಂದು ವೈದ್ಯಕೀಯ ಮೂಲಗಳು ತಿಳಿಸಿವೆ.



ಚಳಿಯಿಂದ ಮನೆ ಇಲ್ಲದೆ ಜೋಪಡಿಗಳಲ್ಲಿ ವಾಸವಿರುವವರು ಶೀತ ಗಾಳಿಯ ನೇರ ಪರಿಣಾಮಕ್ಕೆ ತುತ್ತಾಗುತ್ತಿದ್ದಾರೆ. ದೇಹದ ತಾಪಮಾನ ಅಪಾಯಕಾರಿ ಮಟ್ಟಕ್ಕೆ ಇಳಿಯುವ ಹೈಪೋಥರ್ಮಿಯಾ ಪ್ರಕರಣಗಳು ಹೆಚ್ಚಾಗುವ ಭೀತಿ ಇದೆ. ಹಳೆಯ ಕಾಯಿಲೆಗಳ ತೀವ್ರಗತಿ, ಉಸಿರಾಟದ ತೆ–ೂಂದರೆ ಹೆಚ್ಚುತ್ತಿದೆ ಮತ್ತು ರಾತ್ರಿ ತಂಗಲು ಸ್ಥಳದ ಕೊರತೆ, ಮನೆ ರಹಿತರಿಗೆ ದೊಡ್ಡ ಸಂಕಷ್ಟವಾಗಿದೆ. ಇವರಿಗೆ ಜಿಲ್ಲಾಡಳಿತ ಬ್ಲ್ಯಾಂಕೆಟ್ ವ್ಯವಸ್ಥೆಯೊಂದಿಗೆ ತಾತ್ಕಾಲಿಕ ವಸತಿ ಕಲ್ಪಿಸಬೇಕಾಗಿದೆ ಎಂಬುದು ಸಾರ್ವಜನಿಕರ ಅಭಿಪ್ರಾಯ.

ಬೆಳೆಗಳಿಗೆ ರೋಗಬಾಧೆ: ತಾಪಮಾನ ಕುಸಿತ ಮತ್ತು ಹೆಚ್ಚಿದ ತೇವಾಂಶದಿಂದ ಧಾನ್ಯ, ಬೀಜ, ತರಕಾರಿ ಬೆಳೆಗಳಲ್ಲಿ ಬೆಳವಣಿಗೆ ನಿಧಾನವಾಗಿದೆ. ಟೊಮೆಟೋ, ಬೀನ್ಸ್, ಬದನೆಕಾಯಿ ಬೆಳೆಗಳಲ್ಲಿ ಪದೇ ಪದೇ ಕೀಟ, ರೋಗಗಳು ಕಾಣಿಸಿಕೊಳ್ಳುತ್ತಿವೆ. ಬ್ಲೈಟ್, ಮಿಲ್‌ಡ್ಯೂ, ವಿಲ್ಟ್, ಎಲೆಕಲೆ ರೋಗಗಳು ತರಕಾರಿ ಬೆಳೆಗಳಿಗೆ ತೀವ್ರ ಹಾನಿ ಉಂಟುಮಾಡುತ್ತಿವೆ. ಬೆಳೆಗಳ ಬೆಳವಣಿಗೆ ನಿಧಾನಗೊಳ್ಳುವುದರಿಂದ ಮಾರುಕಟ್ಟೆಗೆ ತರಕಾರಿ ಪೂರೈಕೆ ಕುಗ್ಗಿ ಬೆಲೆ ಏರಿಕೆಗೆ ಕಾರಣವಾಗುವ ಸಾಧ್ಯತೆಗಳಿವೆ.

ಸಾಕು ಪ್ರಾಣಿಗಳಲ್ಲಿ ಆರೋಗ್ಯ ಸಮಸ್ಯೆ: ಚಳಿಯಿಂದ ದನ, ಮೇಕೆ–ಕುರಿಗಳಲ್ಲಿ ಹಾಲು ಉತ್ಪಾದನೆ, ಮಾಂಸ ಶೇಖರಣೆ ಕುಂದಿದ್ದು, ಹೊಸದಾಗಿ ಜನಿಸಿದ ಕರು, ಮೇಕೆ, ಕುರಿಗಳಿಗೆ ತೀವ್ರ ಚಳಿಯ ಅಪಾಯ ಹೆಚ್ಚಾಗಿದೆ. ಕೋಳಿ ಸಾಕಾಣಿಕೆಯಲ್ಲೂ ರೋಗಗಳ ಭೀತಿ ಹೆಚ್ಚಾಗಿದೆ. ರೇಷ್ಮೆ ಉತ್ಪಾದನೆಯಲ್ಲೂ ತೀವ್ರ ಪರಿಣಾಮ ಬೀರುವ ಸಾಧ್ಯತೆ ಇದೆ. ಬೆಳೆ ರಕ್ಷಣೆಗಾಗಿ ರೈತರು ಹೆಚ್ಚಿನ ನಿಗಾ ವಹಿಸಿ ಕೃಷಿ ಮತ್ತು ತೋಟಗಾರಿಕಾ ಅಧಿಕಾರಿಗಳ ಸಲಹೆ ಪಡೆಯಲು ಮುಂದಾಗಬೇಕಾಗಿದೆ.

ಹೀಗಾಗಿ, ನಗರ ಮತ್ತು ಗ್ರಾಮಾಂತರ ಪ್ರದೇಶಗಳಲ್ಲಿ ಮನೆಯಿಂದ ಹೊರ ಬರುವವರು ಚಳಿಯಿಂದ ರಕ್ಷಿಸಿಕೊಳ್ಳಲು ಸ್ವೆಟರ್, ಟೋಪಿ, ಜರ್ಕಿನ್ ಸೇರಿದಂತೆ ಬೆಚ್ಚಗಿಡುವ ಬಟ್ಟೆಗಳಿಗೆ ಮೊರೆ ಹೋಗಿದ್ದಾರೆ. ಚಳಿ ಹೆಚ್ಚಾಗಿರುವ ಕಾರಣ, ಕಾಫಿ, ಚಹಾ ವ್ಯಾಪಾರ ಜೋರಾಗಿ ನಡೆಯುತ್ತಿದೆ. ಸಿಗರೇಟ್ ಬಳಕೆ, ಮದ್ಯದಂಗಡಿಗಳಲ್ಲಿ ಹೆಚ್ಚಿನ ವಹಿವಾಟು ನಡೆಯುತ್ತಿದೆ. ಚಳಿ ವಾತಾವರಣದಿಂದ ಬೆಳಗ್ಗೆ ಜನತೆ ವಾಕಿಂಗ್ ಬರಲು ಹಿಂದೇಟು ಹಾಕುತ್ತಿದ್ದರೆ.

ಚಳಿ ಮುಂದುವರಿಕೆ ಸಾಧ್ಯತೆ: ಡಿಸೆಂಬರ್, ಜನವರಿ, ಫೆಬ್ರವರಿಯಲ್ಲಿ ರಾತ್ರಿ, ಮುಂಜಾನೆ ಚಳಿ ಮುಂದುವರಿಯಲಿದ್ದು, ಮಾರ್ಚ್ ವೇಳೆಗೆ ಸಾಮಾನ್ಯ ಬೇಸಿಗೆ ಪ್ರವೇಶಿಸುವ ಸಾಧ್ಯತೆ ಇದೆ. ಚಳಿಯ ಈ ಅವಧಿಯಲ್ಲಿ ಆರೋಗ್ಯ ಜಾಗೃತಿ, ಮನೆ ರಹಿತರಿಗೆ ಆಶ್ರಯ ಮನೆಗಳ ವ್ಯವಸ್ಥೆ ಮತ್ತು ರೈತರಿಗೆ ತಾಂತ್ರಿಕ, ಆರ್ಥಿಕ ಬೆಂಬಲ ಅಗತ್ಯವಿದ್ದು, ಪರಿಣಾಮಕಾರಿ ಕ್ರಮಗಳನ್ನು ಕೈಗೊಳ್ಳದಿದ್ದರೆ ಆರೋಗ್ಯ ಮತ್ತು ಕೃಷಿ ಎರಡೂ ಕ್ಷೇತ್ರಗಳಲ್ಲಿ ನಷ್ಟ ಹೆಚ್ಚಾಗುವ ಸಾಧ್ಯತೆ ಇರುವುದಾಗಿ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

**– ಕೆ.ಆರ್. ದೊಡ್ಡಮನಿ, ಡಂಬಳ.**

# ಶಿವಕುಮಾರ್ ಹಾದಿಮನಿ ಅವಿರೋಧ ಆಯ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಕವಿಪ್ರನಿ ನೌಕರರ ಸಂಘ (659) ಗದಗನ ಪ್ರಾಥಮಿಕ ಸಮಿತಿ ಚುನಾವಣೆಯ ಶಾಖೆ 3ರ ವತಿಯಿಂದ ಶಿವಕುಮಾರ ಹಾದಿಮನಿ ಅವಿರೋಧವಾಗಿ ಆಯ್ಕೆಯಾಗಿದ್ದಾರೆ. ಹಾದಿಮನಿ ಅವರ ಅವಿರೋಧ ಆಯ್ಕೆಗೆ



ಗೆಳೆಯರ ಬಳಗದ ರಜತ್ ಭೀಮಕರ್, ಮೋಹನ್ ವರವಿ, ಸಂತೋಷಗೌಡ ಹುಡೆದಮಠ, ವಿನಾಯಕ್ ಚಲವಾದಿ, ಗಿರೀಶ್ ಪವಾರ, ಸಂತೋಷ ಮೈನಳ್ಳಿ ಸೇರಿದಂತೆ ಅವರ ಅಪಾರ ಸ್ನೇಹ ಬಳಗ ಅಭಿನಂದಿಸಿ, ಶುಭ ಕೋರಿದ್ದಾರೆ.

# ಜಾತ್ಯತೀತತೆಯನ್ನು ಮಾತ್ರ ನಂಬುತ್ತೇನೆ; ಕೋಮುವಾದವನ್ನಲ್ಲ: ಮಮತಾ ಬ್ಯಾನರ್ಜಿ

**■ವಿಜಯಸಾಕ್ಷಿ ಸುದ್ದಿ, ಕಲ್ಕತಾ**

ನಾನು ಕೋಮುವಾದದಲ್ಲಿ ನಂಬಿಕೆ ಇಡುವುದಿಲ್ಲ. ಜಾತ್ಯತೀತತೆಯನ್ನು ಮಾತ್ರ ನಂಬುತ್ತೇನೆ. ಚುನಾವಣೆ ಸಮೀಪಿಸಿದಾಗಲೆಲ್ಲಾ, ಬಿಜೆಪಿ ಹಣವನ್ನು ಬಳಸಿ ಇತರ ರಾಜ್ಯಗಳಿಂದ ಜನರನ್ನು ಕರೆತಂದು ಸಾರ್ವಜನಿಕರನ್ನು ವಿಭಜಿಸಲು ಪ್ರಯತ್ನಿಸುತ್ತದೆ ಎಂದು ಪಶ್ಚಿಮ ಬಂಗಾಳ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಗುರುವಾರ ಹೇಳಿದರು.

ರಾಜ್ಯದಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿಗಳ ವಿಶೇಷ ತೀವ್ರ ಪರಿಷ್ಕರಣೆ (ಎಸ್‌ಐಆರ್) ಅನ್ನು ಗುರಿಯಾಗಿಸಿಕೊಂಡು ಮಾತನಾಡಿದ ಅವರು, ಪರಿಶೀಲನೆಯ ಸಮಯದಲ್ಲಿ ನಿಮ್ಮ ಹೆಸರುಗಳನ್ನು ಅಳಿಸಿದರೆ ಮಹಿಳೆಯರು ಅಡುಗೆ ಸಲಕರಣೆಗಳೊಂದಿಗೆ ಸಿದ್ಧರಾಗಿರಬೇಕು ಎಂದು ಎಚ್ಚರಿಸಿದ್ದಾರೆ.

"ಎಸ್‌ಐಆರ್ ಹೆಸರಿನಲ್ಲಿ ನೀವು ನಮ್ಮ ತಾಯಂದಿರು ಮತ್ತು ಸಹೋದರಿಯರ ಹಕ್ಕುಗಳನ್ನು ಕಸಿದುಕೊಳ್ಳುತ್ತೀರಿ? ಬಿಜೆಪಿಯವರು ಚುನಾವಣೆಯ ಸಮಯದಲ್ಲಿ ದೆಹಲಿಯಿಂದ ಪೊಲೀಸರನ್ನು ಕರೆತಂದು ತಾಯಂದಿರು ಮತ್ತು ಸಹೋದರಿಯರನ್ನು



ಬೆದರಿಸುತ್ತಾರೆ. ತಾಯಂದಿರೇ ಮತ್ತು ಸಹೋದರಿಯರೇ, ನಿಮ್ಮ ಹೆಸರುಗಳನ್ನು ಅಳಿಸಿದರೆ, ನಿಮ್ಮ ಬಳಿ ಸಲಕರಣೆಗಳು ಇವೆಯಲ್ಲವೇ?, ನೀವು ಅಡುಗೆಗೆ ಬಳಸುವ ಉಪಕರಣಗಳು ಇವೆಯಲ್ಲವೇ?. ನಿಮಗೆ ಶಕ್ತಿ ಇದೆ ಅಲ್ಲವೇ? ನಿಮ್ಮ ಹೆಸರುಗಳನ್ನು ತೆಗೆದುಹಾಕಿದವರು ನಿಮ್ಮನ್ನು ಹಾದುಹೋಗಲು ಬಿಡುವುದಿಲ್ಲ ಅಲ್ಲವೇ? ಇದರ ವಿರುದ್ಧ ಮಹಿಳೆಯರು ಮುಂಭಾಗದಲ್ಲಿ ಹೋರಾಡುತ್ತಾರೆ, ಪುರುಷರು ಅವರ ಹಿಂದೆ ನಿಲ್ಲುತ್ತಾರೆ" ಎಂದು ಕೃಷ್ಣನಗರದಲ್ಲಿ ನಡೆದ ರ್‍ಯಾಲಿಯಲ್ಲಿ ಮಮತಾ ಬ್ಯಾನರ್ಜಿ ಹೇಳಿದರು.

"ಯಾರು ಹೆಚ್ಚು ಶಕ್ತಿಶಾಲಿಗಳು, ರಾಜ್ಯದ ಮಹಿಳೆಯರು ಅಥವಾ ಬಿಜೆಪಿ ಎಂದು ನೋಡಲು ನಾನು ಬಯಸಿದ್ದೇನೆ" ಎಂದು ಅವರು ಹೇಳಿದರು.

"ನಾನು ಕೋಮುವಾದದಲ್ಲಿ ನಂಬಿಕೆ ಇಡುವುದಿಲ್ಲ. ಜಾತ್ಯತೀತತೆಯನ್ನು ನಂಬುತ್ತೇನೆ. ಚುನಾವಣೆ ಸಮೀಪಿಸಿದಾಗಲೆಲ್ಲಾ, ಬಿಜೆಪಿ ಹಣವನ್ನು ಬಳಸಿ ಇತರ ರಾಜ್ಯಗಳಿಂದ ಜನರನ್ನು ಕರೆತಂದು ಸಾರ್ವಜನಿಕರನ್ನು ವಿಭಜಿಸಲು ಪ್ರಯತ್ನಿಸುತ್ತದೆ" ಎಂದು ಅವರು ಹೇಳಿದರು.

ಸ್ವಾತಂತ್ರ್ಯಕ್ಕಾಗಿ ಹೋರಾಡಿ ದೇಶಕ್ಕಾಗಿ ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದ ಬಂಗಾಳದ ಜನರು ತಾವು ಭಾರತದ ನಾಗರಿಕರು ಎಂದು ಸಾಬೀತುಪಡಿಸಬೇಕು ಎಂದು ಬ್ಯಾನರ್ಜಿ ಹೇಳಿದರು.

"ನೀವು ನಮ್ಮ ಮೇಲೆ ದಾಳಿ ಮಾಡಿದರೆ, ನಮಗೆ ಹೇಗೆ ಪ್ರತೀಕಾರ ತೀರಿಸಿಕೊಳ್ಳಬೇಕೆಂದು ತಿಳಿದಿದೆ. ಅನ್ಯಾಯವನ್ನು ಹೇಗೆ ನಿಲ್ಲಿಸಬೇಕೆಂದು ನಮಗೆ ತಿಳಿದಿದೆ" ಎಂದು ಅವರು ಹೇಳಿದರು. ಬಿಜೆಪಿ ತನ್ನ ಐಟಿ ಸೆಲ್ ಸಿದ್ಧಪಡಿಸಿದ ಪಟ್ಟಿಗಳ ಆಧಾರದ ಮೇಲೆ ಚುನಾವಣೆಗಳನ್ನು ನಡೆಸಲು ಯೋಜಿಸಿದೆ. ನೆನಪಿಡಿ, ಬಿಹಾರಕ್ಕೆ ಸಾಧ್ಯವಾಗಲಿಲ್ಲ, ಆದರೆ ಬಂಗಾಳವು ನೀವು ಏನೇ ಮಾಡಿದರೂ ಅದನ್ನು ಮಾಡುತ್ತದೆ ಎಂದು ಅವರು ಎಚ್ಚರಿಕೆ ನೀಡಿದರು.

ಜಿಲ್ಲಾಧಿಕಾರಿ ದಿವ್ಯ ಪ್ರಭು ಅಧ್ಯಕ್ಷತೆಯಲ್ಲಿ ಜರುಗಿದ ಖಾಸಗಿ ಆಸ್ಪತ್ರೆಗಳ ಸಭೆ


# ಉತ್ತಮ ರೀತಿಯಲ್ಲಿ ಆಸ್ಪತ್ರೆ ನಡೆಸಿ

**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಕೆಪಿಎಂಇ ಕಾಯ್ದೆಯಡಿ ಖಾಸಗಿ ಆಸ್ಪತ್ರೆಗಳ ನೋಂದಣಿಗಾಗಿ ಹಾಗೂ ನೋಂದಣಿ ನವೀಕರಣಕ್ಕಾಗಿ ಯಾರಿಗೂ ವಿನಂತಿಸುವ ಅಗತ್ಯವಿಲ್ಲ. ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಿ, ಪರಿಶೀಲಿಸಿ, ಕೆಪಿಎಂಇ ನಿಯಮಾನುಸಾರ ಇದ್ದಲ್ಲಿ 90 ದಿನಗಳಲ್ಲಿ ಪ್ರಮಾಣಪತ್ರ ನೀಡಲಾಗುತ್ತದೆ. ಎಲ್ಲವನ್ನು ಪಾರದರ್ಶಕತೆಯಿಂದ ಮಾಡಲಾಗುತ್ತದೆ ಎಂದು ಜಿಲ್ಲಾಧಿಕಾರಿ ದಿವ್ಯ ಪ್ರಭು ಹೇಳಿದರು.

ಅವರು ಬುಧವಾರ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕೆಪಿಎಂಇ ಕಾಯ್ದೆಯಡಿ ನೋಂದಾಯಿತ ಖಾಸಗಿ ಆಸ್ಪತ್ರೆಗಳ ಸಭೆ ಜರುಗಿಸಿ ಮಾತನಾಡಿದರು.

ಎಲ್ಲ ಆಸ್ಪತ್ರೆಗಳು ಕೆಪಿಎಂಇ ಕಾಯ್ದೆ ಪಾಲನೆ ಮಾಡುವುದು ಕಡ್ಡಾಯವಾಗಿದೆ.



ಅವಳಿ ನಗರದಲ್ಲಿ ಕೆಲವು ಆಸ್ಪತ್ರೆಗಳು ರೋಗಿಗಳಿಂದ ಹೆಚ್ಚು ದರ ವಸೂಲು ಮಾಡುತ್ತಿರುವುದು, ಸಮರ್ಪಕ ಚಿಕಿತ್ಸೆ ನೀಡದೆ ಕೊನೆಯ ಹಂತದಲ್ಲಿ ಬೇರೆ ಆಸ್ಪತ್ರೆಗಳಿಗೆ ಶಿಫಾರಸ್ಸು ಮಾಡುವುದು, ಇದರಿಂದ ರೋಗಿಗಳಿಗೆ ತೊಂದರೆ ಆಗುತ್ತಿದೆ ಎಂದು ದೂರು ಬಂದಿವೆ. ಸಾರ್ವಜನಿಕರಿಂದ ದೂರುಗಳು ಬಂದಲ್ಲಿ ಕೆಪಿಎಂಇ ಕಾಯ್ದೆ ಅನುಸಾರ ಕ್ರಮಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾಧಿಕಾರಿಗಳು ಎಚ್ಚರಿಕೆ ನೀಡಿದರು.

ನಿಯಮಾನುಸಾರ, ಉತ್ತಮ ರೀತಿಯಲ್ಲಿ ಆಸ್ಪತ್ರೆ ನಡೆಸಿ, ಜಿಲ್ಲೆಗೆ ಒಳ್ಳೆಯ ಹೆಸರು ತರಬೇಕು. ಚಿಕಿತ್ಸೆಗೆ ದಾಖಲಾಗುವವರ ಬಗ್ಗೆ ಕಾಳಜಿ, ಕರುಣೆ ಇರಲಿ ಎಂದು ಜಿಲ್ಲಾಧಿಕಾರಿಗಳು ಹೇಳಿದರು.

ಜಿಲ್ಲಾ ಆರೋಗ್ಯಾಧಿಕಾರಿ ಡಾ. ಎಸ್.ಎಂ. ಹೊನಕೇರಿ ಸ್ವಾಗತಿಸಿ, ಸಭೆಯಲ್ಲಿ ಕೆಪಿಎಂಇ ಕಾಯ್ದೆಯ ಪ್ರಾತ್ಯಕ್ಷಿಕೆ ಪ್ರಸ್ತುತಪಡಿಸಿದರು.

ವೇದಿಕೆಯಲ್ಲಿ ಜಿ.ಪಂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ, ಉಪ ವಿಭಾಗಾಧಿಕಾರಿ ಶಾಲಂ ಹುಸೇನ್, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ್ ದೇಸಾಯಿ, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ. ಸಂಗಪ್ಪ ಗಾಬಿ, ಜಿಲ್ಲಾ ಆಯುಷ್ ಅಧಿಕಾರಿ ಡಾ. ಗಣೇಶ ಕಬಾಡಿ, ಕೆಪಿಎಂಇ ನೋಂದಣಿ ಅರ್ಜಿ ಪರಿಶೀಲನೆ ಹಾಗೂ ಸ್ಥಳ ಪರಿವೀಕ್ಷಣಾ ಸಮಿತಿ ಸದಸ್ಯ ಡಾ. ದೇವರಾಜ ವಿರೂಪಾಕ್ಷಯ್ಯ ರಾಯಚೂರು ಇದ್ದರು.

ಸಾರ್ವಜನಿಕ ಆರೋಗ್ಯ ಮತ್ತು ಸುರಕ್ಷತೆ ಮುಖ್ಯವಾಗಿದೆ. ಕೆಪಿಎಂಇ ಕಾಯ್ದೆಯಡಿ ನೋಂದಣಿ ಆಗಿರುವ ಆಸ್ಪತ್ರೆಗಳ ಸಹಕಾರಬೇಕು. ನಕಲಿ ವೈದ್ಯರ, ನಕಲಿ ಆಸ್ಪತ್ರೆ, ನಕಲಿ ಔಷಧಿಗಳನ್ನು ತಡೆಗಟ್ಟಲು, ಅಧಿಕಾರಿಗಳ ಪ್ರತ್ಯೇಕ ತಂಡ ರಚಿಸಿ ಕ್ರಮ ಕೈಗೊಳ್ಳಲಾಗುತ್ತಿದೆ. ನಕಲಿ ವೈದ್ಯರು, ಆಸ್ಪತ್ರೆಗಳು ಇದ್ದಲ್ಲಿ ಸಾರ್ವಜನಿಕರು ಮತ್ತು ವೈದ್ಯರು ಆರೋಗ್ಯ ಇಲಾಖೆಗೆ ಅಥವಾ ಜಿಲ್ಲಾಧಿಕಾರಿಗಳ ಕಚೇರಿಗೆ ಮಾಹಿತಿ ನೀಡಬಹುದು ಎಂದು ಡಿಸಿ ದಿವ್ಯ ಪ್ರಭು ತಿಳಿಸಿದರು.


# ಜಾರ್ಖಂಡ್‌ನ 27 ಮಕ್ಕಳು ನೇಪಾಳಕ್ಕೆ ಕಳ್ಳಸಾಗಣೆ; ತನಿಖೆ ಆರಂಭಿಸಿದ ಪೊಲೀಸರು

**■ವಿಜಯಸಾಕ್ಷಿ ಸುದ್ದಿ, ಜಾರ್ಖಂಡ್**

ಉತ್ತಮ ಶಿಕ್ಷಣ ಒದಗಿಸುವ ನೆಪದಲ್ಲಿ 27 ಮಕ್ಕಳನ್ನು ನೇಪಾಳಕ್ಕೆ ಕಳ್ಳಸಾಗಣೆ ಮಾಡಲಾಗಿದೆ ಎಂಬ ಆರೋಪದ ಮೇಲೆ ಜಾರ್ಖಂಡ್‌ನ ಪಶ್ಚಿಮ ಸಿಂಗ್‌ಭೂಮ್ ಜಿಲ್ಲೆಯ ಪೊಲೀಸರು ಗುರುವಾರ ತನಿಖೆ ಆರಂಭಿಸಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಮಕ್ಕಳನ್ನು ಬೇರೆ ಧರ್ಮಕ್ಕೆ ಮತಾಂತರಿಸಲು ಪ್ರಯತ್ನಿಸಲಾಗಿದೆ ಎಂದು ಆರೋಪಿಸಲಾಗಿದೆ.

27 ಮಕ್ಕಳಲ್ಲಿ ಇಬ್ಬರು ಇತ್ತೀಚೆಗೆ ಕಳ್ಳಸಾಗಣೆದಾರರಿಂದ ತಪ್ಪಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದು, ಮನೆಗೆ ಹಿಂದಿರುಗಿದ ನಂತರ ತಮ್ಮ ಹೆತ್ತವರಿಗೆ ತಾವು ಪಟ್ಟ ಕಷ್ಟವನ್ನು ವಿವರಿಸಿದ ನಂತರ ಈ ಘಟನೆ ಬೆಳಕಿಗೆ ಬಂದಿದೆ.

ತನಿಖೆಯ ಭಾಗವಾಗಿ, ಆ ಗ್ರಾಮದ 11 ಮಕ್ಕಳನ್ನು ನೇಪಾಳಕ್ಕೆ ಕಳ್ಳಸಾಗಾಣೆ ಮಾಡಲಾಗಿದೆ ಎಂದು ತಿಳಿಸಿದಾಗ, ಮಕ್ಕಳ ಗ್ರಾಮಕ್ಕೆ ತನಿಖಾ ತಂಡವನ್ನು



ಕಳುಹಿಸಲಾಗಿದೆ ಎಂದು ಪೊಲೀಸ್ ವರಿಷ್ಠಾಧಿಕಾರಿ ಅಮಿತ್ ರೇಣು ತಿಳಿಸಿದ್ದಾರೆ. ಕಾಣೆಯಾಗಿದ್ದ ಗುಂಪಿನ ನಾಲ್ವರು ಮಕ್ಕಳು ಬುಧವಾರ ಮರಳಿದ್ದಾರೆ ಎಂದು ಪೊಲೀಸ್ ಅಧಿಕಾರಿ ಹೇಳಿದರು.

11 ಜನರಲ್ಲಿ ಐದು ಮಂದಿ ಇನ್ನೂ ನೇಪಾಳದಲ್ಲಿದ್ದಾರೆ, ಅವರನ್ನು ಮರಳಿ ಕರೆತರಲು ಜಿಲ್ಲಾಡಳಿತ ಎಲ್ಲಾ ಕ್ರಮಗಳನ್ನು ತೆಗೆದುಕೊಳ್ಳುತ್ತಿದೆ ಎಂದು ಎಸ್‌ಪಿ ಹೇಳಿದರು.

"ಜಿಲ್ಲೆಯ ಇತರ ಭಾಗಗಳಿಂದ 16 ಇತರ ಮಕ್ಕಳ ಬಗ್ಗೆ ಇದೇ ರೀತಿಯ ವರದಿ ನಮ್ಮ ಗಮನಕ್ಕೆ ಬಂದಿದೆ. ಆದರೆ ಇದುವರೆಗೆ ಯಾವುದೇ ದೂರು ಬಂದಿಲ್ಲ" ಎಂದು ರೇಣು ಹೇಳಿದರು.

ಕಳ್ಳಸಾಗಣೆ ಆರೋಪಕ್ಕೆ ಸಂಬಂಧಿಸಿದಂತೆ ಪ್ರಕರಣ ದಾಖಲಿಸಲಾಗಿದೆ ಎಂದು ಎಸ್‌ಪಿ ಹೇಳಿದರು. ಹೆಚ್ಚಿನ ಮಾಹಿತಿಯನ್ನು ಬಹಿರಂಗಪಡಿಸಲು ಅಧಿಕಾರಿ ನಿರಾಕರಿಸಿದ್ದಾರೆ ಎಂದು ಸ್ಥಳೀಯ ಮಾಧ್ಯಮಗಳು ವರದಿ ಮಾಡಿವೆ.

ಘನ ತ್ಯಾಜ್ಯ ನಿರ್ವಹಣೆ ಕುರಿತು ಒಂದು ದಿನದ ಕಾರ್ಯಾಗಾರ

# ನಗರದ ಸ್ವಚ್ಛತೆ, ಸೌಂದರ್ಯ ಕಾಪಾಡಿ

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಸ್ವಚ್ಛತೆ ಹಾಗೂ ಸೌಂದರ್ಯ ಕಾಪಾಡಿದರೆ ಪರಿಸರ ರಕ್ಷಣೆಯೊಂದಿಗೆ ಆರೋಗ್ಯಕರ ವಾತಾವರಣ ನಿರ್ಮಿಸಲು ಸಾಧ್ಯವಾಗುತ್ತದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ಸ್ವಚ್ಛಭಾರತ ಅಭಿಯಾನದಡಿ ಘನ ತ್ಯಾಜ್ಯ ನಿರ್ವಹಣೆ ಕುರಿತು ಹಮ್ಮಿಕೊಂಡಿದ್ದ ಒಂದು ದಿನದ ಸಾಮರ್ಥ್ಯಾಭಿವೃದ್ಧಿ ಕಾರ್ಯಾಗಾರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ನಗರದಲ್ಲಿ ಉದ್ಯಾನವನಗಳು ಸ್ವಚ್ಛವಾಗಿದ್ದರೆ ಅಲ್ಲಿನ ಸುತ್ತಮುತ್ತಲಿನ ಪರಿಸರ ಚೆನ್ನಾಗಿರುತ್ತದೆ. ಈ ನಿಟ್ಟಿನಲ್ಲಿ ಘನ ತ್ಯಾಜ್ಯ ಸಂಗ್ರಹಣೆ, ವಿಲೇವಾರಿ ಕಾರ್ಯ ಅತೀ ಮುಖ್ಯವಾಗಿದೆ. ನಮ್ಮ ಮನೆಯ ಒಳಗಡೆ ಹೇಗೆ ನಾವು ಸ್ವಚ್ಛತೆ ಕಾಯ್ದುಕೊಳ್ಳುತ್ತೇವೆಯೋ ಹಾಗೆಯೇ ಸಾರ್ವಜನಿಕ ಸ್ಥಳಗಳನ್ನು ಸಹ ಸ್ವಚ್ಛವಾಗಿಟ್ಟುಕೊಳ್ಳಲು ಶ್ರಮಿಸಬೇಕು. ಸ್ವಚ್ಛತೆಗೆ ಆದ್ಯತೆ ಕೊಟ್ಟು ಪರಿಸರ ಮಾಲಿನ್ಯವನ್ನು ತಡೆಗಟ್ಟಿ ನಗರವನ್ನು ಅಭಿವೃದ್ಧಿಪಡಿಸಲು ಕ್ರಮ ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.




ನಗರಸಭೆ ಸದಸ್ಯರಾದ ಎಲ್.ಡಿ. ಚಂದಾವರಿ ಮಾತನಾಡುತ್ತಾ, ಘನ ತ್ಯಾಜ್ಯ ನಿರ್ವಹಣೆಯಲ್ಲಿ ಸಾರ್ವಜನಿಕರ ಪಾತ್ರವೂ ಮಹತ್ವದ್ದಾಗಿದೆ. ನಗರದ ಸ್ವಚ್ಛತೆ ಕಾಪಾಡುವುದು ಸ್ವಚ್ಛತಾ ಸಿಬ್ಬಂದಿಯವರೊಂದಿಗೆ ಸಾರ್ವಜನಿಕರ ಜವಾಬ್ದಾರಿಯೂ ಆಗಿರುತ್ತದೆ. ಕಾಲೇಜುಗಳಲ್ಲಿ ತ್ಯಾಜ್ಯ ವಸ್ತುಗಳ ನಿರ್ವಹಣೆ ಹಾಗೂ ವಿಲೇವಾರಿ ಕುರಿತು ತಿಳುವಳಿಕೆ ಕಾರ್ಯಕ್ರಮ ಆಯೋಜಿಸಬೇಕು ಎಂದು ತಿಳಿಸಿದರು.

ಕಾರ್ಯಾಗಾರದಲ್ಲಿ ನಗರಸಭೆ ಸದಸ್ಯರಾದ ಮಹಾಂತೇಶ ನಲವಡಿ, ಸುನಂದಾ ಬಾಕಳೆ, ಶಕುಂತಲಾ ಅಕ್ಕಿ, ಲಕ್ಷ್ಮೀ ಶಂಕರ ಖಾಕಿ, ಮೆಹಬೂಬಸಾಬ ನದಾಫ್, ನಗರಾಭಿವೃದ್ಧಿ ಪ್ರಾಧಿಕಾರದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ನಗರಸಭೆ ಸದಸ್ಯರು, ಸ್ಯಾನಿಟರಿ ಸುಪರ್‌ವೈಸರ್ಸ್, ಕಮ್ಯುನಿಟಿ ಮೊಬಲೈಸರ್ಸ್ ಹಾಜರಿದ್ದರು.

ಗದಗ–ಬೆಟಗೇರಿ ನಗರಸಭೆಯ ಸಹಾಯಕ ಕಾರ್ಯಪಾಲಕ ಅಭಿಯಂತರ (ಪರಿಸರ) ಆನಂದ ಬದಿ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

ಗದಗ–ಬೆಟಗೇರಿ ನಗರಸಭೆ ಪೌರಾಯುಕ್ತ ರಾಜಾರಾಮ ಪವಾರ ಮಾತನಾಡಿ, ಘನತ್ಯಾಜ್ಯ ನಿರ್ವಹಣಾ ಕಾರ್ಯಾಗಾರದ ಸದುಪಯೋಗ ಪಡೆದುಕೊಳ್ಳಬೇಕು. ಕಮ್ಯುನಿಟಿ ಮೊಬಲೈಜರ್‌ಗಳು ವಾರ್ಡ್‌ವಾರು ಮಾಹಿತಿಯನ್ನು ಅಪ್‌ಡೇಟ್ ಮಾಡುತ್ತಾರೆ. ಅವರ ಸಲಹೆಗಳೊಂದಿಗೆ ಸ್ಯಾನಿಟರಿ ಸುಪರ್‌ವೈಸರ್ಸ್ ಜವಾಬ್ದಾರಿಯಿಂದ ಕೆಲಸ ನಿರ್ವಹಿಸಬೇಕು. ಗದಗ ನಗರವನ್ನು ಮೂಲಭೂತ ಸೌಕರ್ಯಗಳೊಂದಿಗೆ ಸ್ವಚ್ಛ ನಗರವನ್ನಾಗಿಸಲು ಎಲ್ಲರೂ ಸಹಕರಿಸಬೇಕೆಂದರು.

# ನೃತ್ಯ ಸಂಭ್ರಮ ಕಾರ್ಯಕ್ರಮ ಡಿ. 14ಕ್ಕೆ

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಭವಾನಿ ಭರತನಾಟ್ಯ ಹಾಗೂ ವಿವಿಧೋದ್ದೇಶಗಳ ಸಂಸ್ಥೆಯಿಂದ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಡಿ. 14ರಂದು ಸಂಜೆ 5ಕ್ಕೆ ಶ್ರೀ ವೀರಗಂಗಾಧರ ಜಗದ್ಗುರುಗಳ ಕಲ್ಯಾಣ ಮಂಟಪದಲ್ಲಿ ನೃತ್ಯ ಸಂಭ್ರಮ ಕಾರ್ಯಕ್ರಮ ನಡೆಯಲಿದೆ.ಶಾಸಕ ಡಾ. ಚಂದ್ರು ಲಮಾಣಿ ಕಾರ್ಯಕ್ರಮ ಉದ್ಘಾಟಿಸುವರು, ಕೆಯುಡಬ್ಲ್ಯೂಎಸ್ ಮತ್ತು ಯುಜಿಡಿ ನಿಗಮದ ಅಧ್ಯಕ್ಷರಾದ ಶಿವಲೀಲಾ ವಿನಯ ಕುಲಕರ್ಣಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ, ಕನ್ನಡ ಮತ್ತ ಸಂಸ್ಕೃತಿ ಇಲಾಖೆಯ ಬಸವರಾಜ ಬಳ್ಳಾರಿ, ಬಸವೇಶ ಮಹಾಂತಶೆಟ್ಟರ, ಸುನೀಲ ಮಹಾಂತಶೆಟ್ಟರ, ಡಾ. ಹೇಮಾ ವಾಘಮೋಡೆ, ಮಹಾದೇವಪ್ಪ ಚಕ್ರಸಾಲಿ ಉಪಸ್ಥಿತರಿರುವರು ಎಂದು ಸಂಸ್ಥೆಯ ಕಾರ್ಯದರ್ಶಿ ಸರೋಜಾ ಗೌಡರ ತಿಳಿಸಿದ್ದಾರೆ.

# ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಯುವ ಸ್ಪಂದನ ಕೇಂದ್ರದಲ್ಲಿ ನರಗುಂದ ತಾಲೂಕು-01, ಶಿರಹಟ್ಟಿ ತಾಲೂಕು-01 ಯುವಪರಿವರ್ತಕರ ಹುದ್ದೆ ಖಾಲಿ ಇದ್ದು, ಹುದ್ದೆಯಲ್ಲಿ ಕಾರ್ಯನಿರ್ವಹಿಸಲು ಪದವೀಧರರಾಗಿರಬೇಕು, ಹಾಗೂ 35 ವರ್ಷದೊಳಗಿನ ಮಹಿಳೆಯರಾಗಿರಬೇಕು, ವಾಕ್ ಚಾತುರ್ಯ ಹೊಂದಿರಬೇಕು, ಕಂಪ್ಯೂಟರ್ ಜ್ಞಾನ ಹಾಗೂ ಟೈಪಿಂಗ್ ಕೌಶಲ್ಯ ಹೊಂದಿರಬೇಕು. ಆಸಕ್ತ ಯುವಕ/ಯುವತಿಯರು ತಮ್ಮ ಸ್ವ-ವಿವರಗಳೊಂದಿಗೆ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗೆ ಡಿ. 17 ರೊಳಗೆ ಅರ್ಜಿಯನ್ನು ಸಲ್ಲಿಸಬಹುದು, ಹೆಚ್ಚಿನ ಮಾಹಿತಿಗಾಗಿ ಮೊ.ಸಂ. 7349223455 ಕಚೇರಿ ದೂರವಾಣಿ ಸಂಖ್ಯೆ 08372-238345ಗೆ ಸಂಪರ್ಕಿಸಬಹುದು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಡಿಜಿಎಂ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಹಳೆಯ ವಿದ್ಯಾರ್ಥಿಗಳ ಸಂಘದಿಂದ ಕಾರ್ಯಕ್ರಮ

# 'ಸ್ನೇಹ ಸಿಂಚನ' ಸಮಾವೇಶ ಡಿ. 14ಕ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಡಿಜಿಎಂ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯ ಮತ್ತು ಆಸ್ಪತ್ರೆಯ ಹಳೆಯ ವಿದ್ಯಾರ್ಥಿಗಳ ಸಂಘದ ವತಿಯಿಂದ 21ನೇ ವರ್ಷದ ಸ್ನೇಹ ಸಿಂಚನ ಸಮಾವೇಶವನ್ನು ಶಿವಾನಂದ ಕಲ್ಯಾಣ ಮಂಟಪದಲ್ಲಿ ಡಿ. 14ರಂದು ಏರ್ಪಡಿಸಲಾಗಿದೆ ಎಂದು ಡಾ. ಎಸ್.ಎನ್. ಬೆಳವಡಿ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಡಿಜಿಎಂ ಆಯುರ್ವೇದ ಮಹಾವಿದ್ಯಾಲಯ ನಾಲ್ಕು ದಶಕದಿಂದ ಸಾವಿರಾರು ವೈದ್ಯರನ್ನು ಸಮಾಜಕ್ಕೆ ಅರ್ಪಿಸಿದೆ. ದೇಶ-ವಿದೇಶದಲ್ಲೂ ಡಿಜಿಎಂ ಮಹಾವಿದ್ಯಾಲಯದಲ್ಲಿ ಕಲಿತವರು ಸೇವೆ ಸಲ್ಲಿಸುತ್ತಿದ್ದಾರೆ. ಅವರೆಲ್ಲರನ್ನು ಒಂದೆಡೆ ಸೇರಿಸುವ ಉದ್ದೇಶದಿಂದ ಈ ಸಮಾವೇಶ ಹಮ್ಮಿಕೊಳ್ಳಲಾಗಿದೆ ಎಂದರು.

ಈ ಬಾರಿಯ ಸಮಾವೇಶಕ್ಕೆ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ, ಖ್ಯಾತ ಜಾನಪದ ಕಲಾವಿದ ಗುರುರಾಜ ಹೊಸಕೋಟೆ, ಶಬ್ಬಿರ ಡಾಂಗೆ ಮುಖ್ಯ ಅತಿಥಿಗಳಾಗಿ ಆಗಮಿಸಿ, ಜಾನಪದ ಗೀತೆಗಳ ಮೂಲಕ ಕಾರ್ಯಕ್ರಮಕ್ಕೆ ರಂಗು ತುಂಬಲಿದ್ದಾರೆ.




ಪಾಂಡಿಚೇರಿಯ ರಾಜೀವ ಗಾಂಧಿ ಆಯುರ್ವೇದ ವೈದ್ಯಕೀಯ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಕುಬೇರ ಸಂಕ ಮತ್ತು ಗದಗ ಜಿಲ್ಲಾ ಆಯುಷ್ ಅಧಿಕಾರಿ ಡಾ. ಜೈಪಾಲ ಸಿಂಗ್ ಸಮೋರೇಕರ್ ಅವರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ ಎಂದರು. ಸಂಸ್ಥೆಯ ಕಾರ್ಯದರ್ಶಿ ಬಿ.ಎಸ್. ಪಾಟೀಲ ಹಾಗೂ ಅಲುಮ್ನಿ ಅಸೋಷಿಯೇಷನ್‌ನ ಸಂಸ್ಥಾಪಕ ಗೌರವಾಧ್ಯಕ್ಷ ಡಾ. ಜಿ.ಬಿ. ಪಾಟೀಲ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಕಾಲೇಜಿನ ಪ್ರಾಚಾರ್ಯ ಡಾ. ಎಸ್.ಎನ್. ಬೆಳವಡಿ ಅಧ್ಯಕ್ಷತೆ ವಹಿಸಲಿದ್ದು, ಡಾ. ಐ.ಎಸ್. ಸರ್ವಿ ಸಮಾರಂಭದ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಮಾಹಿತಿ ನೀಡಿದರು.

ಸಂಪೂರ್ಣ ಪ್ರಾಯೋಜಕತ್ವ ಮತ್ತು ವಿಶೇಷ ಕಾರ್ಯಕ್ರಮಗಳನ್ನು ಬಿ.ಎ.ಎಂ.ಎಸ್ 2000ನೇ ಬ್ಯಾಚಿನ ವಿದ್ಯಾರ್ಥಿಗಳು ವಹಿಸಿಕೊಂಡಿದ್ದಾರೆ. ಸಮಾವೇಶವನ್ನು ಕೇವಲ ಒಂದು ದಿನಕ್ಕೆ ಸೀಮಿತಗೊಳಿಸದೆ, ವರ್ಷವಿಡೀ ಅನೇಕ ಶೈಕ್ಷಣಿಕ, ಸಾಮಾಜಿಕ ಹಾಗೂ ಆರೋಗ್ಯ ಸಂಬಂಧಿತ ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ನಡೆಸಿದ್ದಾರೆ. ಡಿ.ಜಿ.ಎಂ ಅಲುನ್ಮಿ ಟಾಕ್ಸ್ ಎಂಬ ನೂತನ ಕಾರ್ಯಕ್ರಮವನ್ನು ಪರಿಚಯಿಸಿದ್ದು, ಉಚಿತ ಬೃಹತ್ ಆರೋಗ್ಯ ಶಿಬಿರ ಮತ್ತು ನೇತ್ರ ಶಸ್ತ್ರ ಚಿಕಿತ್ಸಾ ಶಿಬಿರಗಳನ್ನು ಸಹ ನಡೆಸಿದ್ದಾರೆ.

ಸಮಾವೇಶದಲ್ಲಿ ಹಳೆಯ ವಿದ್ಯಾರ್ಥಿಗಳಿಗೆ ಗುರುವಂದನಾ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಸಾಧಕರ ಹಾಗೂ ಮಹಾವಿದ್ಯಾಲಯದ ನಿವೃತ್ತ ನೌಕರರ ಸನ್ಮಾನ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ದೇಶದುದ್ದಗಲಕ್ಕೂ ಇರುವ ಸಾವಿರಕ್ಕೂ ಹೆಚ್ಚು ಹಳೆಯ ವಿದ್ಯಾರ್ಥಿಗಳು ಈ ಸಮಾವೇಶದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ ಎಂದು ಡಾ. ಎಸ್.ಎನ್. ಬೆಳವಡಿ ತಿಳಿಸಿದರು.

ಸುದ್ದಿಗೋಷ್ಠಿಯಲ್ಲಿ ಡಾ. ಚಂದ್ರಕಾಂತ ಇಟಗಿ, ಡಾ. ಯು.ವಿ. ಪುರದ, ಡಾ. ಐ.ಬಿ. ಕೊಟ್ಟೂರಶೆಟ್ಟರ, ಡಾ. ಕುಮಾರ, ಡಾ. ವೀಣಾ ಕೋರಿ, ಡಾ. ಎಮ್.ವಿ. ಸೊಬಗಿನ, ಡಾ. ಬೂದೇಶ ಕಣಾಜ ಇದ್ದರು.

# ಅಂಗವಿಕಲರಿಗೆ ಅವಕಾಶ ಕಲ್ಪಿಸಿ




**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಅಂಗವಿಕಲರಿಗೆ ಅನುಕಂಪ ತೋರಿಸುವುದರಿಂದ ಅವರ ಬದುಕು ಉದ್ಧಾರ ಆಗಲಾರದು. ಅದಕ್ಕೆ ಬದಲಾಗಿ ಅವರಿಗೆ ಜೀವನ ಸಾಗಿಸಲು ಅವಕಾಶ ಮಾಡಿಕೊಡಬೇಕು ಎಂದು ತಾಲೂಕು ಹಿರಿಯ ನಾಗರಿಕರು ಮತ್ತು ನಿವೃತ್ತ ನೌಕರರ ಸಂಘದ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ ಹೇಳಿದರು.

ಅವರು ಪಟ್ಟಣದ ಪರ್ವತಮಲ್ಲಯ್ಯನ ದೇವಸ್ಥಾನದಲ್ಲಿ ಬುಧವಾರ ಪುಲಿಗೆರೆ ಸೋಮೇಶ್ವರ ಅಂಗವಿಕಲರ ಸಂಘ, ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಗದಗ ಹಾಗೂ ಪುರಸಭೆ ಲಕ್ಷ್ಮೇಶ್ವರ ನಗರ ಪುನರ್ವಸತಿ ಕಾರ್ಯಕರ್ತರ ಇವರ ಸಂಯುಕ್ತ ಆಶ್ರಯದಲ್ಲಿ ಜರುಗಿದ ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು. ಅಂಗವಿಕಲರು ಎಲ್ಲರಂತೆ ವಿಶ್ವಾಸದಿಂದ ಬದುಕಬೇಕಾದರೆ ಅವರಿಗೆ ಎಲ್ಲ ಕ್ಷೇತ್ರಗಳಲ್ಲಿ ಅವಕಾಶ ಕಲ್ಪಿಸಬೇಕು. ಅವಕಾಶ ಸಿಕ್ಕಾಗ ಮಾತ್ರ ವ್ಯಕ್ತಿ ಬೆಳವಣಿಗೆ ಹೊಂದಲು ಸಾಧ್ಯ ಎಂದು ಹೇಳಿದರು.

ಬಸವರಾಜ ಬೆಂಡಿಗೇರಿ ಮಾತನಾಡಿ, ಅಂಗವಿಕಲರ ಕಲ್ಯಾಣಕ್ಕಾಗಿ ಸರ್ಕಾರ ಸಾಕಷ್ಟು ಯೋಜನೆಗಳನ್ನು ರೂಪಿಸಿದೆ. ಅಂಗವಿಕಲರು ಅವುಗಳ ಬಗ್ಗೆ ಅರಿತುಕೊಂಡು ಅವುಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಶಿಕ್ಷಕಿ ಎಮ್.ಆರ್. ಹಿರೇಮಠ ಉಪನ್ಯಾಸ ನೀಡಿದರು. ಈ ಸಂದರ್ಭದಲ್ಲಿ ಎನ್.ವಿ. ಹೇಮಗಿರಿಮಠ, ಆಯ್.ಎಸ್. ಮಡಿವಾಳರ, ಆರ್.ಎಂ. ಶಿರಹಟ್ಟಿ, ಜೆ.ಎಸ್. ನಾಗಲೋಟಿ, ಷಣ್ಮುಖ ಗಡ್ಡೆಣ್ಣವರ, ಉಮಾ ಚೀಲಗೌಡರ, ಬಸವರಾಜ ಅರ್ಕಸಾಲಿ, ಶಂಕರ ಸಿಳ್ಳಿನ, ಅಕ್ಕಮ್ಮ ಕುಂಬಾರ, ಶಿವಲಿಂಗಪ್ಪ ಕುಂಬಾರ, ಪರಶುರಾಮ ಧರ್ಮದಾಸ ಮತ್ತಿತರರು ಇದ್ದರು.

### ಆಶ್ರಯ ನಿವೇಶನ ಫಲಾನುಭವಿಗಳಿಂದ ನಿವೇಶನ ಜಾಗೆಗಳನ್ನು ಗುರುತಿಸಿಕೊಡುವಂತೆ ಮನವಿ

# 7 ವರ್ಷ ಕಳೆದರೂ ಕಾಣದ ನಿವೇಶನ!

**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದಲ್ಲಿ ಸುಮಾರು 7 ವರ್ಷಗಳ ಹಿಂದೆ ಆಶ್ರಯ ನಿವೇಶನದ ಹಕ್ಕುಪತ್ರಗಳನ್ನು ಪಡೆದಕೊಂಡ ಫಲಾನುಭವಿಗಳು ನಿವೇಶನ ಜಾಗೆಗಳನ್ನು ಗುರುತಿಸಿಕೊಡುವಂತೆ ಅಲೆದಾಡುತ್ತಿದ್ದು, ಇದೀಗ ಬುಧವಾರ ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಅವರನ್ನು ಭೇಟಿ ಮಾಡಿ ನಿವೇಶನ ಜಾಗೆ ಗುರುತಿಸಿಕೊಡುವಂತೆ ಅಧಿಕಾರಿಗಳಿಗೆ ಸೂಚನೆ ನೀಡಲು ಮನವಿ ಮಾಡಿದರು.

ಮನವಿ ಸ್ವೀಕರಿಸಿದ ಮಾಜಿ ಶಾಸಕ ರಾಮಕೃಷ್ಣ ದೊಡ್ಡಮನಿ ಮಾತನಾಡಿ, ಕಳೆದ 7 ವರ್ಷಗಳ ಹಿಂದೆ ನಾನು ಶಾಸಕನಿದ್ದ ಅವಧಿಯಲ್ಲಿ ಆಶ್ರಯ ನಿವೇಶನದ ಹಕ್ಕುಪತ್ರಗಳನ್ನು ನೀಡಲಾಗಿತ್ತು. ಆದರೆ ಫಲಾನುಭವಿಗಳಿಗೆ ಇದುವರೆಗೂ ನಿವೇಶನ ಜಾಗೆಗಳನ್ನು ಗುರುತಿಸಿಕೊಡುವ ಕಾರ್ಯವಾಗದಿರುವದು ವಿಷಾದ ಸಂಗತಿಯಾಗಿದ್ದು, ಈ ಕುರಿತಂತೆ ಪುರಸಭೆ ಮುಖ್ಯಾಧಿಕಾರಿಗಳು ಕೂಡಲೇ ಜಾಗೆ ಗುರುತಿಸಿಕೊಡುವ ಕಾರ್ಯ ಮಾಡಬೇಕು ಎಂದು ಆಗ್ರಹಿಸಿದರು.



ಇದೇ ವೇಳೆ ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ಅವರಿಗೆ ಮೊಬೈಲ್ ಕರೆ ಮಾಡಿ ಹಕ್ಕುಪತ್ರ ಪಡೆದ ಫಲಾನುಭವಿಗಳ ಸಮಸ್ಯೆಯನ್ನು ಶೀಘ್ರವೇ ಸರಿಪಡಿಸಿ ಎಂದು ಸೂಚಿಸಿದರು. ರೋಣ ಶಾಸಕ ಹಾಗೂ ಖನಿಜ ನಿಗಮದ ಅಧ್ಯಕ್ಷ ಜಿ.ಎಸ್. ಪಾಟೀಲ ಅವರಿಗೂ ಸಹ ಫಲಾನುಭವಿಗಳು ಮನವಿ ಸಲ್ಲಿಸಿ ಸರಕಾರ ಮಟ್ಟದಲ್ಲಿ ಅನೂಕೂಲ ಮಾಡಿಕೊಡುವಂತೆ ವಿನಂತಿಸಿದರು.

2018ರಲ್ಲಿ ಕಾಂಗ್ರೆಸ್ ಸರಕಾರವಿದ್ದಾಗ ನಿವೇಶನಗಳಿಗೆ 45 ಎಕರೆ ಜಮೀನು ಖರೀದಿ ಮಾಡಿ ಅದರಲ್ಲಿ 400ಕ್ಕಿಂತ ಹೆಚ್ಚು ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ ಮಾಡಲಾಗಿತ್ತು. ಆದರೆ ಈ ಕುರಿತು ಇಲ್ಲಿಯವರೆಗೂ ಹಾಲಿ ಶಾಸಕರು ಆಸಕ್ತಿ ವಹಿಸಿ ಕೆಲಸ ಮಾಡುತ್ತಿಲ್ಲ ಎಂದು ಆರೋಪಿಸಿದರು. ಶಾಸಕರು ಈ ಬಗ್ಗೆ ಸರಕಾರದ ಗಮನ ಸೆಳೆದು ಬಡವರಿಗೆ, ಮನೆಯಿಲ್ಲದವರಿಗೆ ನಿವೇಶನ ಕೊಡಿಸಲು ಪ್ರಯತ್ನ ಮಾಡಬೇಕು. ಇನ್ನು 15 ದಿನದೊಳಗೆ ಫಲಾನುಭವಿಗಳಿಗೆ ನಿವೇಶನ ಜಾಗೆ ಗುರುತಿಸಿಕೊಡದಿದ್ದರೆ ಫಲಾನುಭವಿಗಳೊಂದಿಗೆ ಲಕ್ಷ್ಮೇಶ್ವರ ಪುರಸಭೆ ಎದುರು ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು. ಈ ಸಂದರ್ಭದಲ್ಲಿ ಪುರಸಭೆ ನಾಮ ನಿರ್ದೇಶಿತ ಸದಸ್ಯ ಪ್ರಕಾಶ ಕೊಂಚಿಗೇರಿಮಠ, ಅಲ್ಲಾಭಕ್ಷಿ ಬೆಟಗೇರಿ, ನಾಗರಾಜ ಚಿಂಚಲಿ, ಸಿದ್ದು ದುರಗಣ್ಣವರ, ಛಾಯಪ್ಪ ಬಸಾಪುರ, ರಾಮಣ್ಣ ರಿತ್ತಿ, ಫಲಾನುಭವಿಗಳಾದ ಸುಶಿಲವ್ವ ಹಿರೇಮಠ, ಶಿವಲೀಲಾ ಹಿಪ್ಪರಗಿ, ಶಿವಗಂಗವ್ವ ಹುಡೇದ, ನಿರ್ಮಲಾ ಬೆಳದಡಿ, ಶೋಭಾ ಕಮತದ, ಶ್ಯಾಮಲಾ ಹುಲ್ಲೆಪ್ಪನವರ, ರೇಣುಕಾ ಮುದಕವಿ, ಸೌಭಾಗ್ಯಲಕ್ಷ್ಮೀ ಕಟ್ಟಿಮನಿ, ಶಾಂತವ್ವ ಮುಂತಾದವರು ಇದ್ದರು.

# ನೂತನ ಎಸ್‌ಡಿಎಂಸಿ ಸದಸ್ಯರ ಪದಗ್ರಹಣ

**■ವಿಜಯಸಾಕ್ಷಿ ಸುದ್ದಿ, ಡಂಬಳ**

ಸರ್ಕಾರಿ ಶಾಲೆಯ ವಿದ್ಯಾರ್ಥಿಗಳು ಉತ್ತಮ ಶಿಕ್ಷಣ ಪಡೆದು ತಮ್ಮ ಜೀವನ ರೂಪಿಸಿಕೊಳ್ಳಬೇಕೆಂದು ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಮರಿಯಪ್ಪ ಬ.ಬಚೇನಹಳ್ಳಿ ಹೇಳಿದರು.

ಡಂಬಳ ಹೋಬಳಿಯ ಡ.ಸ. ರಾಮೆನಳ್ಳಿ ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ನೂತನವಾಗಿ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಪದಗ್ರಹಣ ಕಾರ್ಯಕ್ರಮದಲ್ಲಿ ಸನ್ಮಾನ ಸ್ವೀಕರಿಸಿ ಮಾತನಾಡಿದ ಅವರು, ಖಾಸಗಿ ಶಾಲೆಯಲ್ಲಿ ಓದುವ ವಿದ್ಯಾರ್ಥಿಗಳೇ ಬುದ್ಧಿವಂತರಾಗಿರುತ್ತಾರೆ ಎನ್ನುವುದು ಶುದ್ಧ ಸುಳ್ಳು. ಸರಕಾರಿ ಶಾಲೆಯ ಮಕ್ಕಳು ಕೂಡ ಬುದ್ಧಿವಂತರಿರುತ್ತಾರೆ. ಸರಕಾರಿ ಶಾಲೆಯಲ್ಲಿ ಕಲಿತು ದೊಡ್ಡ ದೊಡ್ಡ ಹುದ್ದೆಗಳನ್ನು ಪಡೆದುಕೊಂಡಿದ್ದಾರೆ ಎಂದು ವಿದ್ಯಾರ್ಥಿಗಳನ್ನು ಹುರಿದುಂಬಿಸಿದರು.


ಶಾಲೆಯ ಮುಖ್ಯಶಿಕ್ಷಕ ಎಸ್.ವಾಯ್. ಕನ್ನೇರ ಮಾತನಾಡಿ, ಬೆಳೆಯುವ ಪೈರು ಮೊಳಕೆಯಲ್ಲಿ. ಆ ಮೊಳಕೆ ಬೆಳೆದು ದೊಡ್ಡ ಮರವಾಗಬೇಕು. ಅದಕ್ಕೆ ಪೋಷಣೆಯ ಅವಶ್ಯಕತೆ ಇದೆ. ಹಾಗೆಯೇ ಮಕ್ಕಳ ಬದುಕು ಉತ್ತಮಗೊಳ್ಳಲು ಗುರುವೃಂದ ಮತ್ತು ಎಸ್‌ಡಿಎಂಸಿ ಕಾರ್ಯ ಗುರುತರವಾದದ್ದು ಎಂದು ಹೇಳಿದರು.




ನೂತನ ಅಧ್ಯಕ್ಷರಾಗಿ ಮರಿಯಪ್ಪ ಬ.ಬಚೇನಹಳ್ಳಿ, ಉಪಾಧ್ಯಕ್ಷೆಯಾಗಿ ಸುಶೀಲಾ ಸಂದಿಗೋಡ, ಸದಸ್ಯರಾಗಿ ಶರಣಪ್ಪ ಆನಿ, ರಾಜಪ್ಪ ಸಾಸ್ವಿಹಳ್ಳಿ, ಯಂಕಪ್ಪ ಕೂಲಿ, ಸಿದ್ದಪ್ಪ ಮಂಡಲಗೇರಿ, ಮಂಜುನಾಥ ಅಸೂಟಿ, ಸೋಮಪ್ಪ ಸಂದಿಗೋಡ, ಮಹಾಂತೇಶ ಹರಿಜನ, ಮೈಲಪ್ಪ ಪೂಜಾರಿ, ಕಸ್ತೂರವ ವಗ್ಗರಣೆ, ಸವಿತಾ ಸುಗ್ನಳ್ಳಿ, ದೇವಕ್ಕ ಕೂಲಿ, ಲಲಿತ ಕೂಲಿ, ಯಲ್ಲವ್ವ ಹೊರಪೇಟೆ, ಪೂರ್ಣಿಮಾ ಪೂಜಾರ, ಫಕೀರವ ಹರಿಜನ, ರಮಜಾನಬೀ ನದಾಫ್ ಅವರನ್ನು ಸನ್ಮಾನಿಸಲಾಯಿತು.

ಕಾರ್ಯಕ್ರಮದಲ್ಲಿ ಗುರುವೃಂದದ ಎಚ್.ಜಿ. ವಡ್ಡರ, ಸಾವಿತ್ರಿ ವಡ್ಡಟ್ಟಿ, ಗ್ರಾಮದ ಹಿರಿಯರು, ವಿದ್ಯಾರ್ಥಿಗಳು ಇದ್ದರು. ಕೆ.ಆರ್. ಯತ್ನಟ್ಟಿ ನಿರೂಪಿಸಿದರು. ಈರಮ್ಮ ಸ್ಥಾವರಮಠ ವಂದಿಸಿದರು.

# ಎಲ್ಲರೂ ಸಮಾನವಾಗಿ ಜೀವನ ಸಾಗಿಸಬೇಕು



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ನಂ.4ರಲ್ಲಿ ಬುಧವಾರ ವಿಶ್ವ ಮಾನವ ಹಕ್ಕುಗಳ ದಿನ ಆಚರಿಸಲಾಯಿತು.

ಹಿರಿಯ ದಿವಾಣಿ ನ್ಯಾಯಾಧೀಶರಾದ ಭರತ್ ಯೋಗೇಶ್ ಕರಗುದರಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿ, ಈ ವಿಶ್ವದಲ್ಲಿ ಎಲ್ಲರೂ ಸಮಾನವಾಗಿ ಜೀವನ ಸಾಗಿಸಬೇಕು ಎಂಬ ಕಾರಣಕ್ಕಾಗಿ ಮಾನವ ಹಕ್ಕುಗಳ ದಿನ ಆಚರಿಸಲಾಗುತ್ತಿದೆ. ಹಿಂದಿನ ದಿನಗಳಲ್ಲಿ ಮನುಷ್ಯರೇ ಮನುಷ್ಯರನ್ನು ಶೋಷಣೆ ಮಾಡುತ್ತಿದ್ದ ವಿಷಯ ಇತಿಹಾಸದ ಪುಟಗಳಿಂದ ನಾವು ಅರಿತುಕೊಂಡಿದ್ದೇವೆ. ಅದನ್ನು ತಪ್ಪಿಸುವ ಸಲುವಾಗಿಯೇ ಈ ವಿಶ್ವ ಮಾನವ ಹಕ್ಕುಗಳ ದಿನ ಆಚರಣೆ ಜಾರಿಗೆ ಬಂದಿದೆ. ಶ್ರೀಮಂತರು ಬಡವರನ್ನು, ನಿರ್ಗತಿಕರನ್ನು ಶೋಷಿಸುವುದನ್ನು ತಡೆಯುವುದು ಮಾನವ ಹಕ್ಕುಗಳ ಗುರಿಯಾಗಿದೆ ಎಂದು ಹೇಳಿದರು.

ದಿವಾಣಿ ನ್ಯಾಯಾಧೀಶ ಸತೀಶ ಎಂ, ವಕೀಲರ ಸಂಘದ ಅಧ್ಯಕ್ಷ ಬಿ.ವಿ. ನೇಕಾರ ಮಾತನಾಡಿದರು. ಬಿ.ಎಸ್. ಬಾಳೇಶ್ವರಮಠ, ತಾಲೂಕು ಶಿಕ್ಷಣ ಇಲಾಖೆಯ ರಾಘವೇಂದ್ರ ಜೋಶಿ, ಮುಖ್ಯ ಶಿಕ್ಷಕ ಎಸ್.ಎಚ್. ಸಣ್ಣಮನಿ ಮತ್ತು ಶಿಕ್ಷಕರು, ಸಿಬ್ಬಂದಿಗಳು ಇದ್ದರು.

# ನವೋದಯ ಪರೀಕ್ಷೆ ಪಾರದರ್ಶಕವಾಗಿರಲಿ

**■ವಿಜಯಸಾಕ್ಷಿ ಸುದ್ದಿ, ಗದಗ**

ಡಿ. 13ರಂದು ನಡೆಯಲಿರುವ ನವೋದಯ ಪರೀಕ್ಷೆಯ ಪ್ರತಿಯೊಂದು ಕೊಠಡಿಯಲ್ಲಿ ಕಡ್ಡಾಯವಾಗಿ ಸಿಸಿ ಕ್ಯಾಮೆರಾಗಳನ್ನು ಅಳವಡಿಸಿ, ಪರೀಕ್ಷೆ ನಡೆಯುವ ಸ್ಥಳದಲ್ಲಿ ಆಯೋಜಿಸಿರುವ ಶಿಕ್ಷಕರು ಕಡ್ಡಾಯವಾಗಿ ನಿಯಮವನ್ನು ಪಾಲಿಸಬೇಕು ಮತ್ತು ನ್ಯಾಯಯುತವಾಗಿ ಪರೀಕ್ಷೆಯನ್ನು ನಡೆಸಬೇಕು. ಒಂದು ವೇಳೆ ಪರೀಕ್ಷೆ ನಡೆಯುವ ಕೊಠಡಿಯಲ್ಲಿ ಯಾವುದೇ ರೀತಿಯ ಅಸಭ್ಯ ವರ್ತನೆ ಕಂಡುಬಂದರೆ ಸಂಬಂಧಪಟ್ಟ ಶಿಕ್ಷಣ ಇಲಾಖೆಯ ಅಧಿಕಾರಿಗಳೇ ಹೊಣೆಯಾಗಿರುತ್ತಾರೆ.

ಅಂಥಹ ಘಟನೆಗಳು ಜರಗದಂತೆ ಮುನ್ನೆಚ್ಚರಿಕೆ ವಹಿಸಿ ಪರೀಕ್ಷೆಯ ಕೊಠಡಿಗಳನ್ನು ಪರಿಶೀಲಿಸಿ ಸಂಬಂಧಪಟ್ಟ ಅಧಿಕಾರಿಗಳು ಕಾನೂನು ಅಡಿಯಲ್ಲಿ ಪರೀಕ್ಷೆಯನ್ನು ನಡೆಸಬೇಕೆಂದು ಜಯ ಕರ್ನಾಟಕ ಜನಪರ ವೇದಿಕೆಯ ರಾಜ್ಯ ಉಪಾಧ್ಯಕ್ಷ ಹಾಲಪ್ಪ ಈ.ವರವಿ ಅವರು ಪತ್ರಿಕಾ ಪ್ರಕಟಣೆ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಮಾಡಿದ್ದಾರೆ.



### ಗೋವಾ ನೈಟ್ ಕ್ಲಬ್ ಮಾಲೀಕರ ಮಧ್ಯಂತರ ಜಾಮೀನು ನಿರಾಕರಣೆ

# ಥೈಲ್ಯಾಂಡ್‌ನಿಂದಲೂ ಗಡಿಪಾರು ಪ್ರಕ್ರಿಯೆ ಆರಂಭ

**■ವಿಜಯಸಾಕ್ಷಿ ಸುದ್ದಿ, ನವದೆಹಲಿ**

ಕಳೆದ ವಾರ ಕನಿಷ್ಠ 25 ಜನರ ಸಾವಿಗೆ ಕಾರಣವಾಗಿದ್ದ, ಗೋವಾದ ಬಿರ್ಚ್ ಬೈ ರೋಮಿಯೋ ಲೇನ್ ನೈಟ್‌ಕ್ಲಬ್‌ನ ಮಾಲೀಕರಾದ ಸೌರಭ್ ಮತ್ತು ಗೌರವ್ ಲುಥ್ರಾಸ್ ಅವರ ಟ್ರಾನ್ಸಿಟ್ ನಿರೀಕ್ಷಣಾ ಜಾಮೀನು ಅರ್ಜಿಯನ್ನು ದೆಹಲಿ ನ್ಯಾಯಾಲಯ ಗುರುವಾರ ನಿರಾಕರಿಸಿದೆ.

ಥೈಲ್ಯಾಂಡ್‌ನಿಂದ ದೆಹಲಿಗೆ ಹಿಂದಿರುಗಿದ ನಂತರ, ತಕ್ಷಣದ ಬಂಧನದಿಂದ ರಕ್ಷಣೆ ಕೋರಿ ಸಹೋದರರು ಬುಧವಾರ ನಾಲ್ಕು ವಾರಗಳ ಟ್ರಾನ್ಸಿಟ್ (ಸಾರಿಗೆ) ನಿರೀಕ್ಷಣಾ ಜಾಮೀನು ಕೋರಿದರು. ಭಾರತೀಯ ಕಾನೂನು ಜಾರಿ ಸಂಸ್ಥೆಗಳ ಕೋರಿಕೆಯ ಮೇರೆಗೆ ಗುರುವಾರ ಮುಂಜಾನೆ ಥಾಯ್ ಪೊಲೀಸರು ಸಹೋದರರನ್ನು ಬಂಧಿಸಿದ್ದು, ಅಧಿಕಾರಿಗಳ ಪ್ರಕಾರ, ಅವರನ್ನು ಗಡೀಪಾರು ಮಾಡುವ ಪ್ರಕ್ರಿಯೆಯೂ ಆರಂಭವಾಗಿದೆ.



ಟ್ರಾನ್ಸಿಟ್ ಜಾಮೀನು ಅರ್ಹತೆಯ ಆಧಾರದ ಮೇಲೆ ಆಗುವ ನಿರ್ಧಾರವಲ್ಲ, ಬದಲಿಗೆ ಸರಿಯಾದ ಸಮಯಕ್ಕೆ ನ್ಯಾಯಾಲಯ ಸುರಕ್ಷಿತ ಪ್ರವೇಶವನ್ನು ಖಚಿತಪಡಿಸಿಕೊಳ್ಳಲು ಇರುವ ಸೀಮಿತ ರಕ್ಷಣೆಯ ಭಾಗ ಎಂದು ವಕೀಲರು ಹೇಳಿದ್ದಾರೆ. ಈ ವೇಳೆ ವಿದೇಶದಲ್ಲಿರುವ ಆರೋಪಿಯೊಬ್ಬನ ವಿರುದ್ಧ ಬ್ಲೂ ಮತ್ತು ರೆಡ್ ಕಾರ್ನರ್ ನೋಟಿಸ್‌ಗಳನ್ನು ಜಾರಿಗೊಳಿಸಲು ಯೋಜಿಸಲಾಗಿದ್ದಲ್ಲಿ, ತಾತ್ಕಾಲಿಕ ರಕ್ಷಣೆಯೊಂದಿಗೆ ಭಾರತಕ್ಕೆ ಮರಳಲು ಅನುಮತಿ ನೀಡುವ ಸುಪ್ರೀಂ ಕೋರ್ಟ್ ಆದೇಶವನ್ನು ಅವರು ಉಲ್ಲೇಖಿಸಿದ್ದಾರೆ.

ಟ್ರಾನ್ಸಿಟ್ ಜಾಮೀನು ಕೋರಿ ಸಲ್ಲಿಸಿರುವ ಅರ್ಜಿಯಲ್ಲಿ "ನ್ಯಾಯಾಲಯವನ್ನು ಸುರಕ್ಷಿತವಾಗಿ ತಲುಪಲು ನಾನು ಕೆಲವು ದಿನಗಳವರೆಗೆ ಮಾತ್ರ ರಕ್ಷಣೆ ಬಯಸುತ್ತೇನೆ. ಒಬ್ಬ ನಾಗರಿಕನು ಕಾನೂನಿಗೆ ವಿಧೇಯನಾಗಲು ಸಿದ್ಧನಿರುವಾಗ, ನ್ಯಾಯಾಲಯವು ಸಹಾಯ ಹಸ್ತ ಚಾಚಬೇಕು, ಮುಷ್ಟಿಯಲ್ಲ" ಎಂದು ಗೌರವ್ ಲೂಥ್ರಾಸ್ ಹೇಳಿದ್ದಾರೆ.

## ದಸ್ತು ಬರಹಗಾರರ ಮುಷ್ಕರ ಇಂದಿನಿಂದ

■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಡಿ.12ರಿಂದ ಶಿರಹಟ್ಟಿಯ ತಹಸೀಲ್ದಾರ ಕಚೇರಿ ಎದುರು ಗದಗ ಜಿಲ್ಲಾ ನೋಂದಣಿ ಮತ್ತು ಮುದ್ರಾಂಕ ಇಲಾಖೆಯಿಂದ ಪರವಾನಿಗೆ ಪಡೆದ (ದಸ್ತು) ಪತ್ರ ಬರಹಗಾರರ ಟ್ರಸ್ಟ್ ಶಿರಹಟ್ಟಿ ವತಿಯಿಂದ ವಿವಿಧ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಅನಿರ್ದಿಷ್ಟಾವಧಿಯ ಮುಷ್ಕರ ನಡೆಸುವ ಕುರಿತು ತಹಸೀಲ್ದಾರ ರಾಘವೇಂದ್ರರಾವ್‌ಕೆ ಮತ್ತು ಉಪನೊಂದಣಾಧಿಕಾರಿ ಶರಣಪ್ಪ ಪವಾರ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಟ್ರಸ್ಟ್‌ನ ಅಧ್ಯಕ್ಷ ಅಶೋಕ ಹುಬ್ಬಳ್ಳಿ, ಉಪಾಧ್ಯಕ್ಷ ಶಿವಬಸಪ್ಪ ದಶಮನಿ, ಪತ್ರ ಬರಹಗಾರರ ಬೇಡಿಕೆಗಳನ್ನು ಈಡೇರಿಸಲು ಆಗ್ರಹಿಸಿ ರಾಜ್ಯಾದ್ಯಂತ ಅನಿರ್ದಿಷ್ಟಾವಧಿ ಧರಣಿ ನಡೆಸಲಾಗುತ್ತಿದ್ದು, ಈ ಕೂಡಲೇ ನಮ್ಮ ಬೇಡಿಕೆಗಳಾದ ಹೊರ ರಾಜ್ಯದಲ್ಲಿರುವಂತೆ ನಮ್ಮ ರಾಜ್ಯದಲ್ಲೂ ಸಹ ಪತ್ರ ಬರಹಗಾರರಿಗೆ ಪ್ರತ್ಯೇಕ ಲಾಗಿನ್ ನೀಡುವುದು, ನೋಂದಾವಣಿ ಆಗುವ ಎಲ್ಲಾ ದಸ್ತಾವೇಜುಗಳಿಗೆ ಕಡ್ಡಾಯವಾಗಿ ಪತ್ರ ಬರಹಗಾರರ ಅಥವಾ ವಕೀಲ ಬಿಕ್ಕಲಂ ಕಡ್ಡಾಯಗೊಳಿಸುವುದು, ಅನಧಿಕೃತ ವ್ಯಕ್ತಿಗಳನ್ನು ತಡೆಗಟ್ಟುವುದು ಮತ್ತು ಪತ್ರ ಬರಹಗಾರರಿಗೆ ಗುರುತಿನ ಚೀಟಿಯನ್ನು ನೀಡುವುದು, ದಸ್ತು ಬರಹಗಾರರಿಗೆ ಸೇವಾ ಭದ್ರತೆ ಒದಗಿಸುವುದು ಮುಂತಾದ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಡಿ.12ರಿಂದ ಕೆಲಸ ಸ್ಥಗಿತಗೊಳಿಸಿ ಪ್ರತಿಭಟನೆ ನಡೆಸಲಾಗುವುದು ಎಂದರು.

ಈ ಸಂದರ್ಭದಲ್ಲಿ ನಜೀರ ಡಂಬಳ, ಮೋಹನ ಹೊಂಬಾಳಿ, ಶಂಕರ ಕುಸ್ಲಾಪೂರ, ಬಾಬಾಜಾನ ಕೋಳಿವಾಡ, ಮೈನು ಅತ್ತಾರ, ಪದ್ಮಾವತಿ ಹುಬ್ಬಳ್ಳಿ, ಮಹಾದೇವಪ್ಪ ಹೊಂಬಾಳಿ, ಮಹಾಂತಪ್ಪ ಪಲ್ಲೇದ, ಮಂಜುನಾಥ ಮೇಣಸಿನಕಾಯಿ ಮುಂತಾದವರು ಉಪಸ್ಥಿತರಿದ್ದರು.

### ಜಲ ಸಂರಕ್ಷಣೆಯಲ್ಲಿ ದೇಶದ ಗಮನ ಸೆಳೆದ ಜಿಲ್ಲೆ /ತಾಲೂಕು ಮಟ್ಟದ ಹಿರಿಯ ಅಧಿಕಾರಿಗಳಿಗೆ ಸನ್ಮಾನ

# ನೌಕರರ ಶ್ರಮಕ್ಕೆ ರಾಷ್ಟ್ರ ಪ್ರಶಸ್ತಿಯ ಗರಿ

■ವಿಜಯಸಾಕ್ಷಿ ಸುದ್ದಿ, ಗದಗ

ಜಲಸಂಚಾಯಿ ಜನಭಾಗಿದಾರಿ-1.0 ಕಾರ್ಯಕ್ರಮದ ಮೂಲಕ ರಾಷ್ಟ್ರ ಮಟ್ಟದಲ್ಲಿ ಗದಗ ಜಿಲ್ಲೆಗೆ ಮನ್ನಣೆ ಸಿಗುವಂತೆ ಮಾಡಿದ ಜಿಲ್ಲೆಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧಿಕಾರಿಗಳು ಮತ್ತು ಸಿಬ್ಬಂದಿಯ ಶ್ರಮ ಮಹತ್ವದ್ದಾಗಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಹೇಳಿದರು.

ಗದಗ ಜಿಲ್ಲಾ ಪಂಚಾಯಿತಿ ಸಭಾಭವನದಲ್ಲಿ ಬುಧವಾರ ಹಮ್ಮಿಕೊಂಡ ಪ್ರಗತಿ ಪರಿಶೀಲನೆ ಮತ್ತು ತಾಲೂಕು ಮಟ್ಟದ ಹಿರಿಯ ಅಧಿಕಾರಿಗಳಿಗೆ ಹಮ್ಮಿಕೊಂಡ ಸನ್ಮಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಜಲಶಕ್ತಿ ಅಭಿಯಾನದ ಮಹತ್ವದ ಭಾಗವಾಗಿರುವ 'ಜಲಸಂಚಾಯಿ ಜನಭಾಗಿದಾರಿ-1.0' ಕಾರ್ಯಕ್ರಮದಲ್ಲಿ ಗದಗ ಜಿಲ್ಲೆಯು ಮಹತ್ವದ ಸಾಧನೆ ಮಾಡುವ ಮೂಲಕ ಕರ್ನಾಟಕದಲ್ಲಿ ಪ್ರಥಮ ಸ್ಥಾನ ಗಳಿಸಿದ್ದು, ರಾಷ್ಟ್ರ ಮಟ್ಟದಲ್ಲಿ 4ನೇ ಸ್ಥಾನ ಪಡೆಯುವ ಮೂಲಕ 25 ಲಕ್ಷ ರೂಪಾಯಿಗಳ ನಗದು ಬಹುಮಾನ ಪಡೆದಿದೆ. ಇದರ ಎಲ್ಲ ಶ್ರೇಯಸ್ಸು ಗ್ರಾಮ ಪಂಚಾಯಿತಿ ಸಿಬ್ಬಂದಿಗಳಿಗೆ ಸಲ್ಲುತ್ತದೆ ಎಂದರು.



ಜಿ.ಪಂ ಉಪ ಕಾರ್ಯದರ್ಶಿ ಸಿ.ಆರ್. ಮುಂಡರಗಿ ಮಾತನಾಡಿ, ಜನ ಭಾಗಿದಾರಿ ಪ್ರಶಸ್ತಿಗೆ ಆಯ್ಕೆ ಮಾಡುವ ಮುನ್ನ ಕೇಂದ್ರ ನೋಡಲ್ ಅಧಿಕಾರಿಗಳು 2025ರ ಜೂನ್ 16ರಿಂದ 21ರವರೆಗೆ ಸ್ಥಳ ಪರಿಶೀಲನೆ, ದಾಖಲೆಗಳ ಪರಿಶೀಲನೆ ನಡೆಸಿ, ಕಾಮಗಾರಿಗಳು ಉನ್ನತ ಮಾನದಂಡಗಳನ್ನು ಪೂರೈಸಿರುವುದು ಖಚಿತಪಡಿಸಿಕೊಂಡು ಮೆಚ್ಚುಗೆ ವ್ಯಕ್ತಪಡಿಸಿದ್ದರು. 465 ಮಳೆ ನೀರು ಕೊಯ್ಲು, 75 ಬೋರ್‌ವೆಲ್ ರಿಚಾರ್ಜ್, 10 ಚೆಕ್‌ಡ್ಯಾಂ ನಿರ್ಮಾಣ ಮಾಡಲಾಗಿದೆ. ಗದಗ ಜಿಲ್ಲೆಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಶ್ರಮ, ಎಲ್ಲ ಹಂತದ ಸಿಬ್ಬಂದಿಗಳ ಮಹತ್ತರ ಕಾರ್ಯ ರಾಷ್ಟ್ರ ಮಟ್ಟದಲ್ಲಿ ಪ್ರಶಸ್ತಿ ಲಭಿಸುವಂತೆ ಮಾಡಿದೆ ಎಂದರು.

ಪ್ರಶಸ್ತಿ ದೊರಕುವಲ್ಲಿ ಶ್ರಮ ವಹಿಸಿದ ಸಹಾಯಕ ಜಿಲ್ಲಾ ಕಾರ್ಯಕ್ರಮ ಸಮನ್ವಯ ಅಧಿಕಾರಿ ಕಿರಣಕುಮಾರ ಎಸ್.ಎಚ್, ತಾಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿಗಳಾದ ಮಲ್ಲಯ್ಯ ಕೊರವನವರ (ಗದಗ), ಶ್ಯಾಮ್ ಸುಂದರ ಇನಾಮದಾರ್ (ನರಗುಂದ), ಕೃಷ್ಣಪ್ಪ ಧರ್ಮರ (ಲಕ್ಷ್ಮೇಶ್ವರ), ವಿಶ್ವನಾಥ ಹೊಸಮನಿ (ಮುಂಡರಗಿ), ಚಂದ್ರಶೇಖರ ಬಿ.ಕಂದಕೂರ (ರೋಣ/ ಗಜೇಂದ್ರಗಡ) ಸಹಾಯಕ ನಿರ್ದೇಶಕರು (ಉಖಾ) ಕುಮಾರ ಪೂಜಾರ (ಗದಗ), ಸಂತೋಷ ಪಾಟೀಲ (ನರಗುಂದ), ಬಸವರಾಜ ಬಡಿಗೇರ (ಗಜೇಂದ್ರಗಡ), ಸುರೇಶ ಲಮಾಣಿ (ಪಂ.ರಾ ಶಿರಹಟ್ಟಿ),ಇ-ಕೆವೈಸಿಯಲ್ಲಿ ಉತ್ತಮ ಪ್ರಗತಿ ಸಾಧಿಸಿದ ಸುರಕೋಡ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಾದ ಶೃತಿ ಸಂಗಳದ, ಎಚ್.ಎಸ್. ಚತ್ರಿ ಇತರರನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಜಿ.ಪಂ ಮುಖ್ಯ ಯೋಜನಾಧಿಕಾರಿ ಎ.ಎ. ಕಂಬಾಳಿಮಠ, ಯೋಜನಾಧಿಕಾರಿಗಳಾದ ಎಂ.ವಿ. ಚಳಗೇರಿ, ಗ್ರಾ.ಪಂ ಅಭಿವೃದ್ಧಿ ಅಧಿಕಾರಿಗಳು ಇತರರು ಇದ್ದರು.

> 2024ರ ಏಪ್ರಿಲ್ 1ರಿಂದ 2025 ಮಾರ್ಚ್ 31ರ ಅವಧಿಯಲ್ಲಿ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ಮನರೇಗಾ) ಹಾಗೂ ಇತರೆ ಯೋಜನೆಗಳಡಿ ಜಿಲ್ಲೆಯ ಗ್ರಾಮೀಣ ಜನರ ಸಹಭಾಗಿತ್ವದಲ್ಲಿ ಮಳೆ ನೀರಿನ ಸಂರಕ್ಷಣೆಗೆ 11,971 ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ. ಈ ಬೃಹತ್ ಜಲ ಸಂರಕ್ಷಣೆ ಕಾರ್ಯ ರಾಷ್ಟ್ರದ ಗಮನ ಸೆಳೆದಿದೆ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ಮೆಚ್ಚುಗೆ ವ್ಯಕ್ತಪಡಿಸಿದರು.

### ಡಿಸೆಂಬರ್ 21ರಂದು ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮ

# 5 ವರ್ಷದೊಳಗಿನ ಮಕ್ಕಳಿಗೆ ತಪ್ಪದೇ ಲಸಿಕೆ ಹಾಕಿಸಿ

■ವಿಜಯಸಾಕ್ಷಿ ಸುದ್ದಿ, ಗದಗ

ಡಿಸೆಂಬರ್ 21ರಂದು ಜಿಲ್ಲೆಯಾದ್ಯಂತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದ್ದು, 5 ವರ್ಷದೊಳಗಿನ ಪ್ರತಿ ಮಗುವಿಗೆ ತಪ್ಪದೇ ಪಲ್ಸ್ ಪೋಲಿಯೋ ಲಸಿಕೆ ಹಾಕಿಸಿ ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಹಮ್ಮಿಕೊಂಡಿದ್ದ ಪಲ್ಸ್ ಪೋಲಿಯೋ ಲಸಿಕಾ ಅಭಿಯಾನ ಕುರಿತ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿ ಡಾ. ಎಸ್.ಎಸ್. ನೀಲಗುಂದ ಮಾತನಾಡಿ, ಡಿಸೆಂಬರ್ 21ಕ್ಕೆ 5 ವರ್ಷದೊಳಗಿನ ಪ್ರತಿಯೊಂದು ಮಗುವಿಗೂ ತಪ್ಪದೇ ಪಲ್ಸ್ ಪೋಲಿಯೋ ಲಸಿಕೆ ಹಾಕಿಸಲು ಕ್ರಮ ವಹಿಸಲಾಗಿದೆ. ಲಸಿಕೆ ನೀಡಲು ಅಗತ್ಯವಿರುವ ಸಿಬ್ಬಂದಿಗಳಾಗಿ ನರ್ಸಿಂಗ್ ಕಾಲೇಜಿನ ವಿದ್ಯಾರ್ಥಿಗಳನ್ನು ಬಳಸಿಕೊಳ್ಳಲು ಹಾಗೂ ರೂಟ್ ಮ್ಯಾಪ್‌ಗಳನ್ನು ಮಾಡಿಕೊಳ್ಳಲಾಗಿದೆ. ವಲಸೆ ಹೋಗಿರುವ ಮತ್ತು ವಲಸೆ ಬಂದಿರುವ ಕುಟುಂಬದ ಮಕ್ಕಳನ್ನು ಗುರುತಿಸಿ ಲಸಿಕೆ ನೀಡಲು ಕ್ರಮ ವಹಿಸಲಾಗಿದೆ. ಜಿಲ್ಲೆಯಲ್ಲಿ 0-5 ವರ್ಷದೊಳಗಿನ 1,15,653 ಮಕ್ಕಳಿಗೆ ಪಲ್ಸ್ ಪೋಲಿಯೋ ಲಸಿಕೆ ಹಾಕುವ ಗುರಿ ಹೊಂದಲಾಗಿದೆ ಎಂದು ಸಭೆಗೆ ತಿಳಿಸಿದರು.



> WHO (ಡಬ್ಲೂಎಚ್‌ಒ) ಬಿಜಾಪುರ ಯುನಿಟ್‌ನ ಎಸ್‌ಎಮ್‌ಒ ಡಾ. ಮುಕುಂದ ಗಲಗಲಿ ಮಾತನಾಡಿ, ಡಿಸೆಂಬರ್ 21ರಂದು ಜಿಲ್ಲೆಯಾದ್ಯಂತ ಪಲ್ಸ್ ಪೋಲಿಯೋ ಲಸಿಕಾ ಕಾರ್ಯಕ್ರಮವನ್ನು ಬೆಳಗ್ಗೆ 8ರಿಂದ ಸಂಜೆ 5 ಗಂಟೆಯವರೆಗೆ ಬೂತ್ ಮಟ್ಟದಲ್ಲಿ ನಡೆಸಲಾಗುತ್ತದೆ. ಡಿಸೆಂಬರ್ 22ರಿಂದ ಡಿಸೆಂಬರ್ 24ರವರೆಗೆ ಮನೆ ಮನೆಗೆ ಭೇಟಿ ನೀಡಿ ಲಸಿಕೆ ನೀಡುವ ಕಾರ್ಯವನ್ನು ಹಮ್ಮಿಕೊಳ್ಳಲಾಗಿದೆ. ಡಿಸೆಂಬರ್ 21ರಿಂದ 24ರವರೆಗೆ 4 ದಿನಗಳು ಸಂಚಾರ ಕೇಂದ್ರಗಳು ಹಾಗೂ ಹೆಚ್ಚಿನ ಅಪಾಯ ಪ್ರದೇಶಗಳಲ್ಲಿ ವಿಶೇಷ ಅಭಿಯಾನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ ಎಂದು ಸಭೆಗೆ ತಿಳಿಸಿದರು.

ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ. ಮಿನಾಕ್ಷಿ ಕೆ.ಎಸ್. ಮಾತನಾಡಿ, 0-5 ವರ್ಷದೊಳಗಿನ ಮಕ್ಕಳಿಗೆ ಶೇ. 100ರಷ್ಟು ಲಸಿಕೆ ನೀಡುವ ಗುರಿ ಹೊಂದಲಾಗಿದೆ ಎಂದರು.

ಈ ಸಂದರ್ಭದಲ್ಲಿ ಉಪವಿಭಾಗಾಧಿಕಾರಿ ಗಂಗಪ್ಪ ಎಂ, ಜಿಲ್ಲಾ ಶಸ್ತ್ರಚಿಕಿತ್ಸಕ ಡಾ. ಕರಿಗೌಡರ, ಜಿಲ್ಲಾ ಕುಷ್ಟರೋಗ ನಿರ್ಮೂಲನಾಧಿಕಾರಿ ಡಾ. ರಾಜೇಂದ್ರ ಬಸರಿಗಿಡದ, ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಥೋಡ, ಗದಗ-ಬೆಟಗೇರಿ ನಗರಸಭೆ ಪೌರಾಯುಕ್ತ ರಾಜರಾಮ ಪವಾರ, ತಾಲೂಕಾ ವೈದ್ಯಾಧಿಕಾರಿಗಳು, ಸಿಪಿಐ, ಪಲ್ಸ್ ಪೋಲಿಯೋ ಜಿಲ್ಲಾ ಟಾಸ್ಕ್‌ಫೋರ್ಸ್ ಸಮಿತಿಯ ಸದಸ್ಯರು ಹಾಜರಿದ್ದರು.

## ಯಶಸ್ಸಿನತ್ತ ಹುಬ್ಬಳ್ಳಿಯ ಸ್ವಾವಲಂಬಿ ಸಖಿ ಒಕ್ಕೂಟ



■ವಿಜಯಸಾಕ್ಷಿ ಸುದ್ದಿ, ಧಾರವಾಡ

1 ಕೋಟಿ ರೂ ವ್ಯಾಪಾರ ವಹಿವಾಟಿನ ಗುರಿಯತ್ತ ಸಾಗುತ್ತಿರುವ ಹುಬ್ಬಳ್ಳಿ-ಧಾರವಾಡದ ಸ್ವಯಂ ಸಹಾಯ ಗುಂಪುಗಳು, ವೃತ್ತಿಪರ ದೃಷ್ಟಿಕೋನವೇ ಯಶಸ್ಸಿನ ಗುಟ್ಟು ಎಂದು ಸಾಬೀತುಪಡಿಸುತ್ತಿವೆ. ನಬಾರ್ಡ್‌ನ ಬೆಂಬಲದೊಂದಿಗೆ ಬೆಳೆಯುತ್ತಿರುವ ಸ್ವಾವಲಂಬಿ ಸಖಿ ಪ್ರೊಡ್ಯೂಸರ್ ಕಂಪನಿ, ಸ್ವಯಂ ಸಹಾಯ ಗುಂಪುಗಳ ಒಕ್ಕೂಟವಾಗಿದೆ.

ಇಂದು ಕಂಪನಿಗೆ 350ಕ್ಕೂ ಹೆಚ್ಚು ಸದಸ್ಯರಿದ್ದು, ಶಿರೂರು ಪಾರ್ಕ್ ರಸ್ತೆ, ಓಯಸಿಸ್ ಮಾಲ್ ಹಾಗೂ ಹುಬ್ಬಳ್ಳಿ ವಿಮಾನ ನಿಲ್ದಾಣದಲ್ಲಿ ಅಂಗಡಿಗಳನ್ನು ನಡೆಸುತ್ತಿದೆ. ನಬಾರ್ಡ್ ಧಾರವಾಡದ ಎಜಿಎಂ ಮಯೂರ ಕಾಂಬಳೆ ಅವರ ಪ್ರಕಾರ, ಈ ಮಹಿಳೆಯರು ಈಗ ನಿಜವಾದ ಸ್ವಾವಲಂಬಿಯಾಗಿ, ಯಾವುದೇ ಬಾಹ್ಯ ನೆರವಿಲ್ಲದೆ ಸಂಸ್ಥೆಯನ್ನು ನಡೆಸುವ ಸಾಮರ್ಥ್ಯ ಹೊಂದಿದ್ದಾರೆ.

ಅವರ ತಾಳ್ಮೆ, ಶ್ರಮ ಮತ್ತು ದೃಢನಿಶ್ಚಯ ಅನೇಕ ಮಹಿಳೆಯರಿಗೆ ಪ್ರೇರಣೆಯಾಗಿವೆ. ಹುಬ್ಬಳ್ಳಿ-ಧಾರವಾಡ ಜಿಲ್ಲೆ ಮುಂದಾಳುತ್ವವನ್ನು ಮುಂದುವರಿಸುತ್ತಿದ್ದು, ಇದರ ಜನರು ಉತ್ತರ ಕರ್ನಾಟಕದ ಹೊಳೆಯುವ ನಕ್ಷತ್ರಗಳಾಗಿದ್ದಾರೆ ಎಂದು ನಬಾರ್ಡ್ ಧಾರವಾಡ ಪ್ರಾದೇಶಿಕ ಕಚೇರಿ ಪ್ರಕಟಣೆಯಲ್ಲಿ ತಿಳಿಸಿದೆ.

## ರಾಷ್ಟ್ರೀಯ ವಿಜ್ಞಾನ ವಿಸ್ತೃತ ಕಾರ್ಯಕ್ರಮ ನಾಳೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಚಂದನ ಸ್ಕೂಲ್‌ನಲ್ಲಿರುವ ಪ್ರೊ. ಸಿಎನ್‌ಆರ್ ರಾವ್ ವಿಜ್ಞಾನ ಕೇಂದ್ರದಲ್ಲಿ ಭಾರತ ರತ್ನ ಪ್ರೊ. ಸಿಎನ್‌ಆರ್ ರಾವ್ ಎಜ್ಯುಕೇಷನ್ ಫೌಂಡೇಷನ್ ಮತ್ತು ಸ್ಕೂಲ್ ಚಂದನ ಇವರ ಸಂಯುಕ್ತ ಆಶ್ರಯದಲ್ಲಿ ರಾಷ್ಟ್ರೀಯ ವಿಜ್ಞಾನ ವಿಸ್ತೃತ ಕಾರ್ಯಕ್ರಮ ಕಳೆದ 10 ವರ್ಷಗಳಿಂದ ಜರಗುತ್ತಿದ್ದು, ಇದೇ ಡಿ. 13ರಂದು 10ನೇ ವರ್ಷದ ವಿಜ್ಞಾನ ವಿಸ್ತೃತ ಕಾರ್ಯಕ್ರಮ ಉದ್ಘಾಟನೆಗೆ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಆಗಮಿಸಲಿದ್ದಾರೆ ಎಂದು ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಟಿ.ಈಶ್ವರ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ಅವರು, ಪ್ರೊ. ಸಿಎನ್‌ಆರ್ ರಾವ್ ಅವರು ಗ್ರಾಮೀಣ ಪ್ರದೇಶದಲ್ಲಿನ ಮಕ್ಕಳಿಗೆ ವಿಜ್ಞಾನ ಆಸಕ್ತಿ ಮೂಡಿಸುವ ಉದ್ದೇಶದಿಂದ ಈ ವಿಜ್ಞಾನ ವಿಸ್ತೃತ ಕಾರ್ಯಕ್ರಮವನ್ನು 10 ವರ್ಷಗಳಿಂದ ಲಕ್ಷ್ಮೇಶ್ವರದ



ಚಂದನ ಶಾಲೆಯಲ್ಲಿ ನಡೆಸುತ್ತಿದ್ದು, ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಪ್ರಖ್ಯಾತ ವಿಜ್ಞಾನಿಗಳು ಇದರಲ್ಲಿ ಪಾಲ್ಗೊಳ್ಳುತ್ತಾರೆ. ಇಂತಹ ವಿಶಿಷ್ಟ ಕಾರ್ಯಕ್ರಮದ ದಶಮಾನೋತ್ಸವ ಕಾರ್ಯಕ್ರಮಕ್ಕೆ ಸಿ.ಎಂ ಸಿದ್ದರಾಮಯ್ಯನವರು ಆಗಮಿಸಿ ಕಾರ್ಯಕ್ರಮ ಉದ್ಘಾಟಿಸುವದರ ಜೊತೆಗೆ ಹಿರಿಯ ನಿವೃತ್ತ ಐಎಎಸ್ ಅಧಿಕಾರಿ ಬಿ.ಎಸ್. ಪಾಟೀಲ ಅವರಿಗೆ ಚಂದನ ಸಂಸ್ಥೆಯ ಪ್ರತಿಷ್ಠಿತ 'ಚಂದನಶ್ರೀ' ಪ್ರಶಸ್ತಿ ನೀಡಿ ಗೌರವಿಸಲಿದ್ದಾರೆ.

ಸಂಸ್ಥೆಯ ನಿರ್ದೇಶಕರಾಗಿದ್ದ ನಿವೃತ್ತ ಶಿಕ್ಷಕ ದಿ. ಎಚ್.ಸಿ. ರಟಗೇರಿ ಅವರ ಕಂಚಿನ ಪುತ್ಥಳಿಯನ್ನು ಅನಾವರಣಗೊಳಿಸಿ, ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡಲಿದ್ದಾರೆ ಎಂದು ಹೇಳಿದರು. ಕಾರ್ಯಕ್ರಮದಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ, ಮಾಜಿ ಕೇಂದ್ರ ಸಚಿವ ಜೈರಾಮ್ ರಮೇಶ, ಗದಗ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಚ್.ಕೆ. ಪಾಟೀಲ, ರೋಣ ಶಾಸಕ ಹಾಗೂ ಖನಿಜ ನಿಗಮದ ಅಧ್ಯಕ್ಷ ಜಿ.ಎಸ್. ಪಾಟೀಲ, ಶಿರಹಟ್ಟಿ ಶಾಸಕ ಡಾ. ಚಂದ್ರು ಲಮಾಣಿ, ಮಾಜಿ ಶಾಸಕರುಗಳಾದ ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ, ರಾಮಕೃಷ್ಣ ದೊಡ್ಡಮನಿ ಆಗಮಿಸಲಿದ್ದು, ಸಂಸ್ಥೆಯ ಸಂಸ್ಥಾಪಕ ಟಿ.ಈಶ್ವರ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಮಾಹಿತಿ ನೀಡಿದ್ದಾರೆ.

### ರೈತ ಹೋರಾಟ ವೇದಿಕೆಯಲ್ಲಿ ಅಂಬೇಡ್ಕರರಿಗೆ ಅಪಚಾರವಾಗಿದೆ ಎಂಬ ಆರೋಪಕ್ಕೆ ರೈತರಿಂದ ಕ್ಷಮಾಪಣೆ

# ರೈತ ಸಂಘಟನೆಯಿಂದ ಸರ್ಕಾರಕ್ಕೆ ಅಭಿನಂದನೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಮೆಕ್ಕೆಜೋಳವನ್ನು ಬೆಂಬಲ ಬೆಲೆಯಡಿ ಖರೀದಿಸಬೇಕು ಎಂದು ಲಕ್ಷ್ಮೇಶ್ವರದಲ್ಲಿ ಸಮಗ್ರ ರೈತ ಸಂಘಟನೆಗಳ ಒಕ್ಕೂಟದಿಂದ 18 ದಿನಗಳ ಕಾಲ ನಡೆಸಿದ ಧರಣಿ ಸತ್ಯಾಗ್ರಹಕ್ಕೆ ಜಯ ಸಿಕ್ಕ ಹಿನ್ನೆಲೆಯಲ್ಲಿ ಹೋರಾಟಕ್ಕೆ ಬೆಲೆಕೊಟ್ಟ ಸರ್ಕಾರ ಮತ್ತು ಪಕ್ಷಾತೀತ, ಜಾತ್ಯಾತೀತವಾಗಿ ಹೋರಾಟಕ್ಕೆ ಬೆಂಬಲ ನೀಡಿದ ಎಲ್ಲರಿಗೂ ಅಭಿನಂದನೆ ಸಲ್ಲಿಸುವ ಕಾರ್ಯಕ್ರಮ ಗುರುವಾರ ಲಕ್ಷ್ಮೇಶ್ವರದಲ್ಲಿ ನಡೆಯಿತು.

ಈ ಅಭಿನಂದನಾ ಕಾರ್ಯಕ್ರಮದಲ್ಲಿ ಮಾತನಾಡಿದ ಸಮಗ್ರ ರೈತ ಸಂಘಟನೆಗಳ ಒಕ್ಕೂಟದ ಅಧ್ಯಕ್ಷ ಮಂಜುನಾಥ ಮಾಗಡಿ ಮತ್ತು ಉತ್ತರ ಕರ್ನಾಟಕ ಮಹಾಸಭಾದ ರಾಜ್ಯಾಧ್ಯಕ್ಷ ರವಿಕಾಂತ ಅಂಗಡಿ, ಮೆಕ್ಕೆಜೋಳವನ್ನು ಬೆಂಬಲ ಬೆಲೆಯಡಿ ಖರೀದಿಸಬೇಕೆಂದು ಲಕ್ಷ್ಮೇಶ್ವರದಲ್ಲಿ ನಡೆಸಿದ 18 ದಿನಗಳ ಹೋರಾಟದ ಫಲವಾಗಿ ರೈತ ಸಮುದಾಯ ರಾಜ್ಯಾದ್ಯಂತ ಧ್ವನಿ ಎತ್ತುವ ಮೂಲಕ ಸರ್ಕಾರದ ಗಮನ ಸೆಳೆಯಲಾಯಿತು. ರೈತರ ಹೋರಾಟಕ್ಕೆ ಸ್ಪಂದಿಸಿದ ಸರ್ಕಾರ ಪ್ರಾರಂಭದಲ್ಲಿ ಪ್ರತಿ ರೈತರಿಂದ 5 ಕ್ವಿಂಟಲ್ ಖರೀದಿಸಲು ಒಪ್ಪಿಗೆ ನೀಡಿದ್ದನ್ನು ವಿರೋಧಿಸಿದ ಪರಿಣಾಮ, ನಂತರ 20 ಕ್ವಿಂಟಲ್, ಬಳಿಕ 50 ಕ್ವಿಂಟಲ್ ಖರೀದಿಗೆ ಅಧಿಸೂಚನೆ ಹೊರಡಿಸಿರುವುದು ಅಭಿನಂದನೀಯ. ಇದು ರೈತ ಒಗ್ಗಟ್ಟಿನ ಹೋರಾಟಕ್ಕಿರುವ ಶಕ್ತಿಯನ್ನು ಸಾಕ್ಷೀಕರಿಸುತ್ತದೆ.



> ರೈತರದ್ದು ರೈತ ಜಾತಿ. ರೈತರು ಯಾವುದೇ ಜಾತಿ, ಧರ್ಮ, ಪಕ್ಷಕ್ಕೆ ಸೇರಿರುವುದಿಲ್ಲ. 18 ದಿನಗಳ ಕಾಲ ರೈತರು ಹೋರಾಟ ನಡೆಸಿದ ಸಂದರ್ಭದಲ್ಲಿ ಅನೇಕ ಮಠಾಧೀಶರು, ರೈತ ಮತ್ತು ಕನ್ನಡಪರ ಸಂಘಟನೆಗಳು, ವ್ಯಾಪಾರಸ್ಥರು, ಮಾಧ್ಯಮದವರು, ಕಂದಾಯ, ಪೊಲೀಸ್, ಆರೋಗ್ಯ, ಪುರಸಭೆ ಮುಂತಾದವರ ಸಹಕಾರ ಸ್ಮರಣೀಯ. 3 ದಿನ ನೋಂದಣಿ ಬಳಿಕ ಖರೀದಿ ಪ್ರಕ್ರಿಯೆ ಪ್ರಾರಂಭಿಸಲಾಗುವುದು ಎಂದು ಹೇಳಿದ ಸರ್ಕಾರ 8 ದಿನ ಕಳೆದರೂ ಖರೀದಿ ಪ್ರಕ್ರಿಯೆ ಪ್ರಾರಂಭಿಸಿಲ್ಲ. ಇದಕ್ಕಾಗಿ ಮತ್ತೆ ಹೋರಾಟಕ್ಕಿಳಿಸಬೇಡಿ ಎಂದು ಮುಖಂಡರು ಎಚ್ಚರಿಸಿದರು.

ರೈತ ಹೋರಾಟ ವೇದಿಕೆಯಲ್ಲಿ 18 ದಿನಗಳ ಕಾಲ ಪೂಜಿಸಲ್ಪಟ್ಟ ಮಹಾತ್ಮ ಗಾಂಧೀಜಿ ಮತ್ತು ಡಾ. ಬಿ.ಆರ್. ಅಂಬೇಡ್ಕರರ ಭಾವಚಿತ್ರಕ್ಕೆ ಅಪಚಾರ ಮಾಡಲಾಗಿದೆ ಎಂದು ಪೊಲೀಸ್ ಠಾಣೆಯಲ್ಲಿ ದೂರು ನೀಡಲಾಗಿದೆ. ಇಂತಹ ಕೆಟ್ಟ ಮನೋಭಾವ, ಕೆಟ್ಟ ಮನಸ್ಥಿತಿ ರೈತರದ್ದಲ್ಲ. ಉಪವಾಸ ನಿರತ ಅನಾರೋಗ್ಯ, ವಯಸ್ಸಾದ ರೈತ ಹೋರಾಟಗಾರನೋರ್ವ ಖುರ್ಚಿ ಮೇಲೆ ಕಾಲು ಇಟ್ಟುಕೊಂಡು ಕುಳಿತ ಸಂದರ್ಭದಲ್ಲಿ ಅಚಾತುರ್ಯದಿಂದ ಖುರ್ಚಿಯ ಮೇಲೆ ಕಾಲೆತ್ತಿಕೊಂಡು ಕುಳಿತಿದ್ದಾರೆ. ಈ ಘಟನೆ ಆಗಬಾರದಿತ್ತು ಅದಕ್ಕಾಗಿ ಪ್ರಾಂಜಲ ಮನಸ್ಸಿನಿಂದ ಕ್ಷಮೆ ಕೋರುತ್ತೇವೆ. ಈ ವಿಷಯವನ್ನು ಬೆಳೆಸುವುದು ಬೇಡ ಎಂದು ಮನವಿ ಮಾಡುತ್ತೇವೆ. ಮನುಕುಲದ ಮಹಾಬೆಳಕಾದ ಅಂಬೇಡ್ಕರರು ಕೊಟ್ಟ ಶಿಕ್ಷಣ, ಸಂಘಟನೆ, ಹೋರಾಟ ಬ್ರಹ್ಮಾಸ್ತ್ರಗಳನ್ನು ಬಡವರ, ದೀನದಲಿತರ, ರೈತರ, ಸಮಾಜದ ಏಳಿಗಾಗಿ ಬಳಸೋಣ ಎಂದರು.

ಈ ವೇಳೆ ಆದ್ರಳ್ಳಿ ಗವಿಮಠದ ಶ್ರೀ ಕುಮಾರ ಮಹಾರಾಜರು, ಕುಂದಗೋಳದ ಬಸವಣ್ಣಜ್ಜನವರು, ಬಟಗುರ್ಕಿ, ಜಮಖಂಡಿ ಶ್ರೀಗಳು, ಪೂರ್ಣಾಜಿ ಖರಾಟೆ, ಹೊನ್ನಪ್ಪ ವಡ್ಡರ, ಮಹೇಶ ಹೊಗೆಸೊಪ್ಪಿನ, ಶರಣು ಗೋಡಿ, ಮಹೇಶ ಲಮಾಣಿ, ಅಶೋಕಗೌಡ ಪಾಟೀಲ,ನಾಗರಾಜ ಚಿಂಚಲಿ, ದಾದಾಪೀರ ಮುಚ್ಚಾಲೆ, ಬಸವಣ್ಣೆಪ್ಪ ನಂದೆಣ್ಣವರ, ನೀಲಪ್ಪ ಶರಸೂರಿ, ಅಮರಪ್ಪ ಗುಡಗುಂಟಿ, ನಾಗೇಶ ಅಮರಾಪುರ ಸೇರಿ ಅನೇಕ ರೈತ ಮುಖಂಡರು, ಸಂಘಟನೆಯವರು ಇದ್ದರು.

# ಪರೀಕ್ಷಾ ಕೇಂದ್ರಗಳ ಸುತ್ತಲೂ ಪ್ರತಿಬಂಧಕಾಜ್ಞೆ ಜಾರಿ

■ವಿಜಯಸಾಕ್ಷಿ ಸುದ್ದಿ, ಗದಗ

ಜವಾಹರ ನವೋದಯ ವಿದ್ಯಾಲಯಕ್ಕೆ ಪ್ರವೇಶ ಕುರಿತು ಪರೀಕ್ಷೆಗಳು ಡಿಸೆಂಬರ್ 13 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 1.30 ಗಂಟೆಯವರೆಗೆ ಜರುಗಲಿವೆ. ಗದಗ ಜಿಲ್ಲೆಯಲ್ಲಿ ಒಟ್ಟು 24 ಪರೀಕ್ಷಾ ಕೇಂದ್ರಗಳಲ್ಲಿ ಜವಾಹರ ನವೋದಯ ವಿದ್ಯಾಲಯದ ಪ್ರವೇಶ ಪರೀಕ್ಷೆಯು ಜರುಗಲಿದೆ. ಪರೀಕ್ಷೆ ಸಮಯದಲ್ಲಿ ನಕಲು ಮಾಡುವುದು, ಪರೀಕ್ಷಾರ್ಥಿಗಳ ಬದಲು ಬೇರೆಯವರು ಪರೀಕ್ಷೆಗೆ ಹಾಜರಾಗುವುದು ಮುಂತಾದ ಅವ್ಯವಹಾರ ತಡೆಗಟ್ಟಲು ಮತ್ತು ಪರೀಕಾ ಕೇಂದ್ರಗಳಲ್ಲಿ ಶಿಸ್ತು ಮತ್ತು ಶಾಂತಿ ಸುವ್ಯವಸ್ಥೆ ಕಾಪಾಡು ಹಿತದೃಷ್ಟಿಯಿಂದ ಸದರ ಪರೀಕಾ ಕೇಂದ್ರದಿಂದ 200 ಮೀಟರ್ ಪ್ರದೇಶವನ್ನು ನಿಷೇಧಿತ ಪ್ರದೇಶವನ್ನಾಗಿ ಘೋಷಿಸಿದೆ.ಪರೀಕ್ಷಾರ್ಥಿಗಳು ಹಾಗೂ ಪರೀಕ್ಷೆಯಲ್ಲಿ ಕಾರ್ಯ ನಿರ್ವಹಿಸುವ ಅಧಿಕಾರಿಗಳು ಮತ್ತು ಸಿಬ್ಬಂದಿಗಳನ್ನು ಹೊರತುಪಡಿಸಿ ಇತರ ಯಾವುದೇ ವ್ಯಕ್ತಿ ಅಥವಾ ಐದು ಐದಕ್ಕಿಂತ ಹೆಚ್ಚು ಜನರು ಗುಂಪು ಕೂಡುವುದು, ಅಥವಾ ವ್ಯಕ್ತಿಗಳ ಗುಂಪುಗಳ ಪ್ರವೇಶವನ್ನು ಹಾಗೂ ಅನಧಿಕೃತ ವ್ಯಕ್ತಿಗಳಿಗೆ ಪರೀಕ್ಷಾ ಕೇಂದ್ರಗಳ ಪ್ರವೇಶ ನಿರ್ಬಂಧಿಸಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಬರುವ ಝರಾಕ್ಸ್ ಅಂಗಡಿ, ಸೈಬರ್ ಸೆಂಟರ್, ಬುಕ್ ಸ್ಟಾಲ್ , ಫೋಟೋ ಕಾಪಿಯರ್‌ಗಳನ್ನು ಬಂದ್ ಮಾಡಲು ಆದೇಶಿಸಿದೆ. ಈ ಪ್ರದೇಶ ವ್ಯಾಪ್ತಿಯಲ್ಲಿ ಪರೀಕ್ಷೆಗಳು ನಡೆಯುವ ಸಮಯದಲ್ಲಿ ಧ್ವನಿವರ್ಧಕಗಳ ಬಳಕೆಯನ್ನು ನಿರ್ಬಂಧಿಸಿದೆ. ಪರೀಕ್ಷಾ ದಿನಗಳಂದು ಪರೀಕ್ಷಾ ಕೇಂದ್ರಗಳಿಗೆ ವಿದ್ಯಾರ್ಥಿಗಳಿಗೂ ಆಗಮಿಸುವ ಸಮಯ ಮತ್ತು ಹೊರಹೋಗುವ ಸಮಯದಲ್ಲಿ ಮಾತ್ರ ಚಿತ್ರೀಕರಿಸಲು ಮಾಧ್ಯಮದವರಿಗೆ ಅವಕಾಶವಿದ್ದು, ಪರೀಕ್ಷಾ ಗೌಪ್ಯತೆ ದೃಷ್ಟಿಯಿಂದ ಪರೀಕ್ಷಾ ಕೊಠಡಿಗಳಲ್ಲಿ ಪ್ರವೇಶ , ಚಿತ್ರೀಕರಣ ಇತ್ಯಾದಿಗಳನ್ನು ಸಂಪೂರ್ಣವಾಗಿ ನಿಷೇಧಿಸಿದೆ.ಮೊಬೈಲ್/ಸೆಲ್ಯೂಲಾರ್ ಫೋನ್, ಟ್ಯಾಬ್ಲೆಟ್, ಪೆನ್‌ಡ್ರೈವ್, ಬ್ಲೂಟೂಥ್ ಡಿವೈಸ್, ಸ್ಮಾರ್ಟ್ ವಾಚ್, ಕ್ಯಾಲ್ಕುಲೇಟರ್ ಮತ್ತು ಇತರೆ ಯಾವುದೇ ರೀತಿಯ ಎಲೆಕ್ಟ್ರಾನಿಕ್ಸ್ ಉಪಕರಣಗಳು ಅಥವಾ ಲಾಗ್ ಟೇಬಲ್ಸ್, ಕೈ ಚೀಲ, ಪರ್ಸ್, ನೋಟುಗಳು, ಚಾರ್ಟ್, ಬಿಡಿ ಹಾಳೆಗಳು ಅಥವಾ ರೆಕಾರ್ಡಿಂಗ್ ವಸ್ತುಗಳನ್ನು ಸೇರಿದಂತೆ ಇನ್ನಿತರ ಯಾವುದೇ ರೀತಿಯ ಉಪಕರಣಗಳನ್ನು ಪರೀಕ್ಷಾ ಕೇಂದ್ರದೊಳಗೆ ಕೊಂಡೊಯ್ಯುವುದನ್ನು ನಿಷೇಧಿಸಲಾಗಿದೆ. ಆರಕ್ಷಕ ಅಧೀಕ್ಷಕರು, ಗದಗ ಇವರು ಈ ಆದೇಶವನ್ನು ಪರಿಣಾಮಕಾರಿಯಾಗಿ ಜಾರಿಗೆ ತರಲು ಅವಶ್ಯಕ ಕ್ರಮ ಜರುಗಿಸತಕ್ಕದ್ದು ಎಂದು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ದಂಡಾಧಿಕಾರಿಗಳು ಆದೇಶಿಸಿದ್ದಾರೆ.

**ವಿಚಕ್ಷಕ ದಳ ರಚನೆ:** ದಿ: 13-12-2025 ರಂದು ಬೆಳಿಗ್ಗೆ 11 ಗಂಟೆಯಿಂದ 1.30 ಗಂಟೆಯವರೆಗೆ ಜವಾಹರ ನವೋದಯ ವಿದ್ಯಾಲಯದಲ್ಲಿ ನಡೆಯುವ ಪರೀಕ್ಷೆ ಸುಗಮವಾಗಿ ಹಾಗೂ ನಿಷ್ಪಕ್ಷಪಾತವಾಗಿ ಜರುಗಲು ಅಗತ್ಯ ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಕಲ್ಪಿಸುವ ಜೊತೆಗೆ ವಿಚಕ್ಷಕ ದಳ ರಚನೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ದಂಡಾಧಿಕಾರಿ ಸಿ.ಎನ್.ಶ್ರೀಧರ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.


ಕರ್ನಾಟಕ ಸರಕಾರ

**ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಗದಗ**

ಸಂಖ್ಯೆ:ಡಿ3/ಜಿಶಿತ/ಗದಗ/ಆಹಾರ/ಟೆಂ/1/2025-26 ದಿನಾಂಕ : 10/12/2025

**ಅಲ್ಪಾವಧಿ ಇ-ಟೆಂಡರ್ ಪ್ರಕಟಣೆ**

ಮಾನ್ಯ ನಿರ್ದೇಶಕರು ಡಿ.ಎಸ್.ಇ.ಆರ್.ಟಿ. ಬೆಂಗಳೂರು ರವರ ಸುತ್ತೋಲೆಯಂತೆ 2025-26 ನೇ ಸಾಲಿನಲ್ಲಿ ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಗದಗ ಅಡಿಯಲ್ಲಿ ನಡೆಯಲಿರುವ ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರ ತರಬೇತಿ ಕಾರ್ಯಕ್ರಮಗಳಿಗೆ ಹಾಗೂ ಇತರೆ ಚಟುವಟಿಕೆಗಳಿಗೆ ಊಟ, ಉಪಹಾರ ಟಿ/ಕಾಫಿ ಸ್ನ್ಯಾಕ್ಸ ಮತ್ತು ಶುದ್ಧ ಕುಡಿಯುವ ನೀರು ಸರಬರಾಜು ಮಾಡಲು ಇ-ಟೆಂಡರ್‌ನ್ನು ಪ್ರಕಟಿಸಲಾಗಿದೆ. ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ : **26-12-2025**. ಟೆಂಡರ್ ಸಂಖೆ: DPI/2025-26/SE0407

ಹೆಚ್ಚಿನ ಮಾಹಿತಿಗಾಗಿ https://kppp.karnataka.gov.in ಜಾಲತಾಣ ಸಂಪರ್ಕಿಸುವುದು.

ಸಹಿ/- ಉಪನಿರ್ದೇಶಕರು (ಅಭಿವೃದ್ಧಿ)
ಜಿಲ್ಲಾ ಶಿಕ್ಷಣ ಮತ್ತು ತರಬೇತಿ ಸಂಸ್ಥೆ, ಗದಗ

ವಾಸಾಸಂಇ/ಗದಗ/ಕೆಎಸ್‌ಎಂಸಿಎ/449/2025-26


VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka